ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 264 RNI Number : KNKAN/25/A2770 07-10-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:264 ರಾಯಚೂರು 07-10-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ದೌರ್ಜನ್ಯ ಪ್ರಕರಣ ನಿಯಂತ್ರಣ ಸಮಿತಿ ಸಭೆ

ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಿ:ಪೂವಿತಾ

ರಾಯಚೂರು ಅ.06

ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತೆವಹಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ಅಕ್ಟೋಬರ್ 06ರ ಮಂಗಳವಾರ ದಂದು ರಾಯಚೂರು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳಿಗೆ ಕರೆದ ಜಿಲ್ಲಾ ದೌರ್ಜನ್ಯ ಪ್ರಕರಣ ನಿಯಂತ್ರಣ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತೆವಹಿಸಲು ದೌರ್ಜನ್ಯ ಪ್ರಕರಣಗಳ ತಾಲ್ಲೂಕು ನಿಯಂತ್ರಣ ಸಮಿತಿ ಸಮಿತಿ ಜಿಲ್ಲೆಯ ಆಯಾ ತಾಲ್ಲೂಕಿನ ತಹಶಿಲ್ದಾರರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದು ಇದರಲ್ಲಿ ಇರುವ ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡುವುದರ ಜೊತೆಗೆ ಪ್ರತಿ



ಬುಧವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಗುರುತಿಸಲಾದ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಗ್ರಾಮಗಳಲ್ಲಿ ಸಭೆ ನಡೆಸುವ ಮೂಲಕ ವಿವಿಧ ಸಮುದಾಯಗಳಲ್ಲಿ ಸೌಹಾರ್ದತೆ ಮೂಡಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲೆಯ ಯಾವುದೇ ಸ್ಥಳದಲ್ಲಿ ದೌರ್ಜನ್ಯ. ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಅಸ್ಪೃಶತೆ ಆಚರಣೆಯಂತಹ ಸಮಸ್ಯೆಗಳು ತಮ್ಮ ಗಮನಕ್ಕೆ ಬಂದರೆ ಈ ಕುರಿತು ತಕ್ಷಣ ಕ್ರಮವಹಿಸಬೇಕು. ಜಿಲ್ಲೆಯ ಯಾವುದೇ ಸಮಸ್ಯೆಗಳು ನಮಗಿಂತ ಮೊದಲು ಆಯಾ ತಾಲೂಕಿನ ಸಮಸ್ಯೆಗಳು ತಮಗೆ ಮೊದಲು ತಿಳಿಯುತ್ತವೆ. ಹಾಗಾಗಿ ಈ ಕುರಿತು ಅಧಿಕಾರಿಗಳು ಗಮನ ಹರಿಸಬೇಕು ಎಂದರು.

ಪ್ರತಿ ಬುಧವಾರ ಈಗಾಗಲೇ ಗುರುತಿಸಿರುವ ಸೆನ್ಸಿ ಟಿವ್ ಹಳ್ಳಿಗಳಲ್ಲಿ ಆಯಾ ತಾಲೂಕಿನ ತಹಶಿಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಒಳಗೊಂಡ ಸಮಿತಿ ಸಭೆ ಪ್ರತಿವಾರ ನಡೆಸಿ ಸಭೆ ನಡೆಸಿದ ಮಾಹಿತಿ ನೀಡಬೇಕು. ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಿದರೆ ಯಾವುದೇ ಸಮಸ್ಯೆಗಳು ಬರುವುದಿಲ್ಲ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ ಕೆಲವು ತಿಂಗಳುಗಳಿದ ಜಿಲ್ಲೆಯಲ್ಲಿ ಬಹಳ ದೌರ್ಜನ್ಯ ಪ್ರಕರಣಗಳು ಬಂದಿವೆ ಅವುಗಳು ಮರುಕಳಿಸದಂತೆ ಅಧಿಕಾರಿಗಳು ಎಚ್ಚರಿಕೆವಹಿಸುವುದರ ಜೊತೆಗೆ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಗ್ರಾಮಗಳೆಂದು ಗುರುತಿಸಿದ ಊರುಗಳಲ್ಲಿ ಸಭೆ ನಡೆಸಿ ವಿವಿಧ ಸಮುದಾಯಗಳು ಸೌಹಾರ್ದತೆಯಿಂದ ಇರುವಂತೆ ಜನರಲ್ಲಿ ಈ

3ನೇ ಪುಟ.....

ಉಪಮುಖ್ಯಮಂತ್ರಿ ಪರಮೇಶ್ವರ ಜಿಲ್ಲಾ ಪ್ರವಾಸ

ರಾಯಚೂರು ಅಕ್ಟೋಬರ್ 06 ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರು ಅಕ್ಟೋಬರ್ 8ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಅಕ್ಟೋಬರ್ 8ರ ಬೆಳಿಗ್ಗೆ 8.30ಕ್ಕೆ ಹೊಸಪೇಟೆಯನ್ನು ರಸ್ತೆ ಮಾರ್ಗವಾಗಿ ನಿರ್ಗಮಿಸಿ, ಅಂದು ಬೆಳಿಗ್ಗೆ 9ಕ್ಕೆ ಕೊಪ್ಪಳ ಮತ್ತು ರಾಯಚೂರು ಜಿಲ್ಲೆಯ ಬರ ಪೀಡಿತ ತಾಲ್ಲೂಕುಗಳ ಬರ ಪೀಡಿತ ಪ್ರದೇಶಗಳ ಸ್ಥಳ ಪರಿಶೀಲನೆ ಮಾಡಿ, ಸಂಜೆ 04ಕ್ಕೆ ಕೊಪ್ಪಳ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ನಂತರ ಸಂಜೆ 6ಕ್ಕೆ ಕೊಪ್ಪಳದಿಂದ ರಸ್ತೆ ಮಾರ್ಗವಾಗಿ ಹುಬ್ಬಳಿ ವಿಮಾನ

3ನೇ ಪುಟ.....

ಎರಡು ದಿನಗಳ ರಾಷ್ಟ್ರಿಯ ಸಮ್ಮೇಳನ

ರಾಯಚೂರು,ಅ.06

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಆಹಾರ ಮತ್ತು ನೀರಿನಲ್ಲಿರುವ ಫರ್ಫೋರ್ ಆಲ್ಕೈಲ್ ಪದಾರ್ಥಗಳು ಹಾಗೂ ಮೈಕ್ರೋಪ್ಲಾಸ್ಟಿಕ್‌ಗಳು(ಎಂಬ ವಿಷಯದ ಮೇಲೆ 2 ಎರಡು ದಿನಗಳ ಪಾಲುದಾರರ ಸಮಾಲೋಚನಾ ರಾಷ್ಟ್ರೀಯ ಸಮ್ಮೇಳನವನ್ನು ಅಕ್ಟೋಬರ್ 29 ಹಾಗೂ 30ರಂದು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗುತ್ತಿದೆ.

ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಇಂಜಿನಿಯರಿಂಗ್ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ. ಅಲ್ಲದೇ, ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ತಮ್ಮ ಸಂಶೋಧನಾ ಪ್ರಬಂಧವನ್ನು (ಣಡಿ ಖಚಿಡಿಛಿ ಚಿಠಿಡಿ) ಸಹ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಸಂಶೋಧನಾ ಪ್ರಬಂಧಕ್ಕೆ ನಗದು ಬಹುಮಾನವನ್ನು ನೀಡಲಾಗುವುದು. ಆಸಕ್ತರು ದಿನಾಂಕ: 20/10/2026ರಳೊಗಾಗಿ) ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳನ್ನು (ಮೊ: 9620767819 9743084194) ಸಂಪರ್ಕಿಸಬಹುದಾಗಿದೆ ಅಥವಾ ಅಕಾಡೆಮಿಯ ವೆಬ್ ಸೈಟ್ ವೀಕ್ಷಿಸಬಹುದಾಗಿದೆ.

ರಾಷ್ಟ್ರಿಯ ಸಮ್ಮೇಳನದ ಸದುಪಯೋಗವನ್ನು ವಿದ್ಯಾರ್ಥಿಗಳು,

3ನೇ ಪುಟ.....

ನಂದಿನಿ ಹಾಲು ಮಾರಾಟ ದರ ಪ್ರತಿ ಲೀಟರ್‌ಗೆ ₹8 ಏರಿಕೆಗೆ ಸಚಿವ ಸಂಪುಟ ಸಭೆ ಒಪ್ಪಿಗೆ

ಬೆಂಗಳೂರು: ನಂದಿನಿ ಹಾಲಿನ ಮಾರಾಟ ದರವನ್ನು ಪ್ರತಿ ಲೀಟರ್‌ಗೆ 8 ರೂ. ಏರಿಕೆಗೆ ಸಚಿವ ಸಂಪುಟ ಸಭೆ ಒಪ್ಪಿಗೆ ಸೂಚಿಸಿದ್ದು, ಪರಿಷತ್ ಚುನಾವಣೆ ನೀತಿ ಸಂಹಿತೆ ಹಿನ್ನೆಲೆ ಸಿಎಂ ಬೆಲೆ ಏರಿಕೆ ಸಂಬಂಧ ಚುನಾವಣಾ ಆಯೋಗಕ್ಕೆ ಪತ್ರ ಬರೆದು ಅನುಮತಿ ಕೋರಲಿದ್ದಾರೆ.

ಇಂದು ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಹಾಲಿನ ದರ ಏರಿಕೆಗೆ ಒಪ್ಪಿಗೆ ಸೂಚಿಸಲಾಗಿದೆ. ಪ್ರತಿ ಲೀಟರ್‌ಗೆ 8 ರೂ.ರಷ್ಟು ಏರಿಕೆ ಮಾಡಲು ಒಪ್ಪಿಗೆ ಸೂಚಿಸಿದೆ. ಈ ಸಂಬಂಧ ಸಿಎಂ ಡಿ.ಕೆ.ಶಿವಕುಮಾರ್ ಪರಿಷತ್ ಚುನಾವಣೆ ನೀತಿ ಸಂಹಿತೆ ಇರುವ ಕಾರಣ ಬೆಲೆ ಏರಿಕೆ ಜಾರಿಗೆ ಅನುಮತಿ ಕೋರಿ ಚುನಾವಣಾ ಆಯೋಗಕ್ಕೆ ಪತ್ರ ಬರೆಯಲು ತೀರ್ಮಾನಿಸಲಾಗಿದೆ. ಚುನಾವಣಾ ಆಯೋಗ ಒಪ್ಪಿಗೆ ಸೂಚಿಸಿದರೆ ನ.1ರಿಂದ ಹಾಲಿನದರ ಏರಿಕೆ ಅನ್ವಯವಾಗುವ ಸಾಧ್ಯತೆ ಇದೆ.

ರಾಜ್ಯ ಹಾಲು ಒಕ್ಕೂಟಗಳು ಮಾರಾಟ ದರ ಏರಿಕೆಗೆ ಒತ್ತಾಯಿಸಿದ್ದರು. ಹಾಲು ಒಕ್ಕೂಟಗಳ ನಿಯೋಗ ಸಿಎಂ ಡಿಕೆಶಿ ಭೇಟಿಯಾಗಿ ಬೆಲೆ ಏರಿಕೆಗೆ ಮನವಿ ಮಾಡಿದ್ದರು. ಹೈನುಗಾರಿಕೆಗೆ ಅಗತ್ಯವಿರುವ ಪಶು ಆಹಾರ, ಮೇವು, ಔಷಧೋಪಚಾರ ಸೇರಿದಂತೆ ನಿರ್ವಹಣಾ ವೆಚ್ಚ ನಿರಂತರವಾಗಿ ಹೆಚ್ಚಾಗುತ್ತಿರುವುದರಿಂದ ಹಾಲಿನ ಉತ್ಪಾದನಾ ವೆಚ್ಚ ಗಣನೀಯವಾಗಿ ಹೆಚ್ಚಾಗಿದ್ದು, ಸದ್ಯದ ಬರ ಪರಿಸ್ಥಿತಿಯಲ್ಲಿ ಬೆಳೆ ಕೊರತೆಯಿಂದ ವ್ಯವಸಾಯ ಆದಾಯ ತೀವ್ರವಾಗಿ ಕುಸಿದಿದ್ದು, ಮೇವಿನ ಲಭ್ಯತೆ ಕಡಿಮೆಯಾಗಿರುವುದರಿಂದ ಹೈನುಗಾರರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ನಿಯೋಗ ಮನವಿ ಮಾಡಿತ್ತು.



ಕರ್ನಾಟಕದಲ್ಲಿ ಒಕ್ಕೂಟ ಉತ್ಪಾದಕರಿಂದ ಟೋನ್ಡ್ ಹಾಲನ್ನು ಲೀಟರಿಗೆ ರೂ.35ಕ್ಕೆ ಖರೀದಿಸುತ್ತಿದ್ದು, ನೆರೆಯ ಆಂಧ್ರಪ್ರದೇಶದಲ್ಲಿ ರೂ. 41.5, ಕೇರಳದಲ್ಲಿ ರೂ. 41.8, ಮಹಾರಾಷ್ಟ್ರದಲ್ಲಿ ರೂ. 41, ತಮಿಳುನಾಡಿನಲ್ಲಿ ರೂ. 42.24 ಕ್ಕೆ ಖರೀದಿಸಲಾಗುತ್ತಿದೆ. ಇದೇ ರೀತಿ ಹಾಲಿನ ಗರಿಷ್ಠ ಮಾರಾಟ ದರದಲ್ಲಿ ಸಹ ನೆರೆಯ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಲೀಟರಿಗೆ ಕನಿಷ್ಠ ರೂ.12 ರಷ್ಟು ಕಡಿಮೆಯಿದೆ ಎಂದು ವಾದಿಸಿತ್ತು.

ಜನವರಿಯಲ್ಲಿ , ಚುನಾವಣೆ?: ಸಚಿವ ಸಂಪುಟ ಸಭೆಯಲ್ಲಿ ಜಿಲ್ಲಾ ಹಾಗೂ ತಾಲೂಕು ಪಂಚಾಯತ್ ಚುನಾವಣೆ ಸಂಬಂಧ ಚರ್ಚೆ ನಡೆಯಿತು. ಚುನಾವಣಾ ಆಯೋಗ , ವಾರ್ಡುವಾರು ಮೀಸಲಾತಿ ಪಟ್ಟಿಗೆ ಒಪ್ಪಿಗೆ ಸೂಚಿಸಿದರೆ ಜನವರಿ ಮೊದಲ ವಾರದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆ ನಡೆಸಲು ಸರ್ಕಾರ ಮುಂದಾಗಿದೆ.

ಎರಡು ದಿನಗಳ ಹಿಂದೆ ರಾಜ್ಯ ಚುನಾವಣಾ ಆಯೋಗಕ್ಕೆ ಸರ್ಕಾರ , ವಾರ್ಡುವಾರು ಮೀಸಲಾತಿ ಪಟ್ಟಿಗೆ ಒಪ್ಪಿಗೆ ಕೋರಿ ಮನವಿ ಸಲ್ಲಿಸಿತ್ತು. ರಾಜ್ಯದಲ್ಲಿ ಪರಿಷತ್ ಚುನಾವಣೆ ನೀತಿ ಸಂಹಿತೆ ಹಿನ್ನೆಲೆ ರಾಜ್ಯ ಚುನಾವಣಾ ಆಯೋಗ ಮೀಸಲಾತಿ ಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗಕ್ಕೆ ಕಳುಹಿಸಿದೆ. ಚುನಾವಣಾ ಆಯೋಗ ಮೀಸಲಾತಿ ಪಟ್ಟಿಗೆ ಒಪ್ಪಿಗೆ ಸೂಚಿಸಿದ ಬಳಿಕ ಆ ಸಂಬಂಧ ಕರಡು ಅಧಿಸೂಚನೆ ಹೊರಡಿಸಲಾಗುವುದು. ಸಾರ್ವಜನಿಕ ಆಕ್ಷೇಪ ಪರಿಗಣಿಸಿದ ಬಳಿಕ ಡಿಸೆಂಬರ್ ಮಧ್ಯದಲ್ಲಿ ವಾರ್ಡುವಾರು ಮೀಸಲಾತಿ ಪಟ್ಟಿಯ ಅಂತಿಮ ಅಧಿಸೂಚನೆ ಪ್ರಕಟಿಸುತ್ತೇವೆ. ಜನವರಿ ಮೊದಲ ವಾರದಲ್ಲಿ , ಚುನಾವಣೆ ನಡೆಸಲು ಮುಂದಾಗಿದ್ದೇವೆ. , ಚುನಾವಣೆಯ 15 ದಿನಗಳ ಬಳಿಕ ಗ್ರಾಮ ಪಂಚಾಯಿತಿ ಚುನಾವಣೆ ನಡೆಸಲು ಉದ್ದೇಶಿಸಲಾಗಿದೆ ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

ಐದು ಪೊಲೀಸ್ ಕಮಿಷನರೇಟ್ ವಿಂಗಡನೆಗೆ ಅಸ್ತು: ಗ್ರೇಟರ್ ಬೆಂಗಳೂರು ಪ್ರಾಧಿಕಾರ () ರಚನೆಯಾಗಿರುವ ಹಿನ್ನೆಲೆಯಲ್ಲಿ, ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ, ಅಪರಾಧ ನಿಯಂತ್ರಣ, ಸಂಚಾರ ನಿರ್ವಹಣೆ ಹಾಗೂ ಸಾರ್ವಜನಿಕ ಸುರಕ್ಷತೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಲು ಬೆಂಗಳೂರು ನಗರ ಪೊಲೀಸ್ ಆಯುಕ್ತಾಲಯವನ್ನು ಸಮಗ್ರವಾಗಿ ಪುನರ್‌ಸಂಘಟಿಸಲು ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

ಸದ್ಯ ಚಾಲ್ತಿಯಲ್ಲಿರುವ ಬೆಂಗಳೂರು ನಗರ ಪೊಲೀಸ್ ಆಯುಕ್ತಾಲಯವನ್ನು ಮುಖ್ಯ ಪೊಲೀಸ್ ಆಯುಕ್ತರ ( ) ಒಟ್ಟಾರೆ ಮೇಲ್ವಿಚಾರಣೆಯಡಿಯಲ್ಲಿ ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ ಮತ್ತು ಕೇಂದ್ರ ಎಂಬ ಐದು ಪ್ರತ್ಯೇಕ ಪೊಲೀಸ್ ಆಯುಕ್ತಾಲಯಗಳಾಗಿ ವಿಭಜಿಸಿ ಪುನರ್ ರಚಿಸಲಾಗುವುದು ಎಂದು ಸಚಿವರು ಹೇಳಿದ್ದಾರೆ.

ಪ್ರಸ್ತುತ ಇರುವ ಪೊಲೀಸ್ ಆಯುಕ್ತರ ಹುದ್ದೆಯನ್ನು 'ಮುಖ್ಯ ಪೊಲೀಸ್ ಆಯುಕ್ತರು' ಎಂದು ಉನ್ನತೀಕರಿಸಲಾಗುವುದು. ಜಂಟಿ ಅಥವಾ ಅಪರ

3ನೇ ಪುಟ.....

ಬೆಂಗಳೂರಿನಲ್ಲಿ ರಾಯಚೂರು ಕುಟುಂಬದ ಆಕ್ರಂದನ

ಉತ್ತಮ ಚಿಕಿತ್ಸೆಗೆ ಜನಪ್ರತಿನಿಧಿಗಳ ನೆರವಿಗೆ ಕೈಮುಗಿದು ಬೇಡುತ್ತಿರುವ ನೊಂದ ಜೀವಗಳು!

ರಾಯಚೂರು.06: ದುಡಿದು ಬದುಕಲು ಹುಟ್ಟೂರು ತೊರೆದು ರಾಜಧಾನಿ ಬೆಂಗಳೂರಿಗೆ ಬಂದಿದ್ದ ಆ ಬಡ ಕುಟುಂಬಕ್ಕೆ ವಿಧಿ ಇಷ್ಟೊಂದು ಕ್ರೂರವಾಗುತ್ತದೆ ಎಂದು ಯಾರೂ ಭಾವಿಸಿರಲಿಲ್ಲ. ಸಿಲಿಂಡರ್ ಸ್ಫೋಟದ ರೂಪದಲ್ಲಿ ಬಂದ ಭೀಕರ ದುರಂತ, ಒಂದೇ ಕುಟುಂಬದ ಆರು ಮಂದಿಯ ಜೀವವನ್ನು ಅಗ್ನಿ ಜ್ವಾಲೆಗೆ ತಳ್ಳಿದೆ.



ರಾಯಚೂರು ಜಿಲ್ಲೆಯ ಸಿರಿವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಈ ಕುಟುಂಬ, ಬದುಕಿನ ಭರವಸೆಯೊಂದಿಗೆ ನಾಯಂಡಹಳ್ಳಿಯ ವಿನಾಯಕ ಲೇಔಟ್‌ನಲ್ಲಿ ನೆಲೆಸಿತ್ತು. ಆದರೆ ಇದ್ದಕ್ಕಿದ್ದಂತೆ ಸಂಭವಿಸಿದ ಭೀಕರ ಸಿಲಿಂಡರ್ ಸ್ಫೋಟ ಅವರ ಬದುಕನ್ನೇ ಕತ್ತಲಿಗೆ ತಳ್ಳಿದೆ. ಬೆಂಕಿಯ ಕೆನ್ನಾಲಗೆಗೆ ಸಿಲುಕಿ ತೀವ್ರವಾಗಿ ಗಾಯಗೊಂಡಿರುವ ಆರು ಮಂದಿ ನರಳಾಡುತ್ತಿರುವ ದೃಶ್ಯ ಕಲ್ಲುಮನಸ್ಸ ನ್ನೂ ಕರಗಿಸುವಂತಿದೆ.

ಪ್ರಸ್ತುತ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಸಾವು-ಬದುಕಿನ ನಡುವೆ ಹೋರಾಡುತ್ತಿರುವ ಈ ನೊಂದ ಜೀವಿಗಳಿಗೆ ಸೂಕ್ತ ಚಿಕಿತ್ಸೆ ಸಿಗದೆ ಪರದಾಡುವಂತಾಗಿದೆ. ಕಳೆದ ಕೆಲವು ದಿನಗಳಿಂದ ಆಸ್ಪತ್ರೆಯ ಮಂಚದ ಮೇಲೆ ನರಳಾಡುತ್ತಿದ್ದರೂ, ಅವರ ರಕ್ಷಣೆಗೆ ಬಾರಬೇಕಾದ ಆಡಳಿತ ವ್ಯವಸ್ಥೆ ಕಣ್ಣಿದ್ದು ಕುರುಡಾದಂತೆ ವರ್ತಿಸುತ್ತಿದೆ ಎಂಬುದು ಅವರ ಬಂಧುಗಳ ಕಣ್ಣೀರಿನ ಅಳಲು.

ನಮ್ಮವರನ್ನು ಉಳಿಸಿಕೊಡಿ ಎಂದು ಕುಟುಂಬದ ಸಂಬಧಿಕರು ಕಣ್ಣೀರಿಡುತ್ತಾ ಜಿಲ್ಲಾ ಉಸ್ತುವಾರಿ ಸಚಿವರು, ಕ್ಷೇತ್ರದ ಶಾಸಕರು ಹಾಗೂ ಸಂಸದರ ನೆರವಾಗಿ ಕಾದು ಕೂತಿದ್ದಾರೆ.

ಇತ್ತೀಚೆಗೆ ಬೆಂಗಳೂರಿನಲ್ಲಿ ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಹೋಕ್ರಾಣಿ ಗ್ರಾಮದ ಕುಟುಂಬದವರು ಬೀಕರ ಸಿಲಿಂಡರ್ ಸ್ಫೋಟಕ್ಕೆ ಒಳಗಾಗಿದ್ದು, ಕುಟುಂಬದ ಸಂಬಧಿಕರು ಉತ್ತಮ ಚಿಕಿತ್ಸೆ ಗೆ ಜಿಲ್ಲೆಯ ಜನಪ್ರತಿನಿಧಿಗಳಲ್ಲಿ ಸಹಾಯ ಹಸ್ತ ಚಾಚಿದ್ದಾರೆ.

ಕಳೆದ ಕೆಲವು ದಿನಗಳಿಂದ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರಿಗೆ ಉತ್ತಮ ಚಿಕಿತ್ಸೆ ದೊರೆಯುತ್ತಿಲ್ಲ. ಹೀಗಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಕ್ಷೇತ್ರದ ಶಾಸಕರು ಅಥವಾ ಲೋಕಸಭಾ ಸದಸ್ಯರು ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಕುಟುಂಬದ ನೆರವಿಗೆ ಧಾವಿಸುವಂತೆ ಗ್ಯಾಸ್ ಸ್ಫೋಟಕ್ಕೆ ಒಳಗಾದ ಕುಟುಂಬ ಸಂಬಧಿಕರು ಮನವಿ ಮಾಡಿದ್ದಾರೆ.

ನಡೆದ ಘಟನೆ: ಬೆಂಗಳೂರು ನಗರದ

3ನೇ ಪುಟ.....

ಸಿರವಾರ ತಾಲೂಕು ಮಡಿವಾಳ ಸಮಾಜದ ತಾಲೂಕ ಅಧ್ಯಕ್ಷರಾಗಿ ಸರ್ವಾನುಮತದಿಂದ ಶರಣಪ್ಪ ಬಿ ಆಯ್ಕೆ

ಸಿರವಾರ,ಆ.06-

ತಾಲೂಕು ಮಡಿವಾಳ ಸಮಾಜದ ತಾಲೂಕಿನ ಮಡಿವಾಳ ಸಮಾಜ ಬಾಂಧವರು ಒಂದಾಗಿ, ಶ್ರೀ ಬಿ. ಶರಣಪ್ಪ ಮಡಿವಾಳ ಅವರನ್ನು ಸರ್ವಾನುಮತದಿಂದ ಸಿರವಾರ ತಾಲೂಕು ಮಡಿವಾಳ ಸಮಾಜದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ ಮಾಡಿರುವುದು ಅತ್ಯಂತ ಹರ್ಷದಾಯಕ ಹಾಗೂ ಗೌರವದ ವಿಷಯ.

ಸಮಾಜದ ಹಿರಿಯರು ಮತ್ತು ಬಂಧುಗಳು ಏಕಮನಸ್ಸಿ ನಿಂದ ನೀಡಿದ ಈ ನಿಶ್ಚಿತ ನಿರ್ಧಾರವು ನಿಮ್ಮ ನಿಸ್ವಾರ್ಥ ಸೇವೆ, ಸಮಾಜ ಮುಖಿ ದೃಷ್ಟಿಕೋನ ಹಾಗೂ ಸದಾ ಶ್ರಮಿಸುವ ಸಮರ್ಪಣಾ ಭಾವಕ್ಕೆ ಸಂದ ಶ್ರೇಷ್ಠ ಗೌರವವಾಗಿದೆ.



ಶ್ರೀ ಬಿ. ಶರಣಪ್ಪ ಮಡಿವಾಳ ಅವರು ಸಮಾಜದ ಸಾರ್ವತ್ರಿಕ ಏಳಿಗೆಗಾಗಿ ನಿಮ್ಮ ಮೇಲಿಟ್ಟಿರುವ ಗುರುತರವಾದ ಜವಾಬ್ದಾರಿ. ನಿಮ್ಮ ಈ ನೂತನ ಸಾರಥ್ಯದಲ್ಲಿ ಸಿರವಾರ ತಾಲೂಕು ಮಡಿವಾಳ ಸಮಾಜವು ಸುಸಂಘಟಿತವಾಗಿ, ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ನವೋದಯವನ್ನು ಕಾಣಲಿ. ಸಮಾಜದ ಪ್ರತಿಯೊಂದು ಕುಟುಂಬಕ್ಕೂ ನಿಮ್ಮ ಕ್ರಿಯಾಶೀಲ ನಾಯಕತ್ವವು ದಾರಿದೀಪವಾಗಲಿ.

ಜಗದ್ಗುರು ಶ್ರೀ ಗುರು ಮಡಿವಾಳ ಮಾಚಿದೇವರ ದಿವ್ಯ ಆಶೀರ್ವಾದ ಸದಾ ನಿಮ್ಮ ಮೇಲಿರಲಿ. ಈ ಮಹತ್ತರ ಜವಾಬ್ದಾರಿಯನ್ನು ಅತ್ಯಂತ ಯಶಸ್ವಿಯಾಗಿ ನಿರ್ವಹಿಸಲು ಭಗವಂತನು ನಿಮಗೆ ಆಯುಷ್ಯ, ಆರೋಗ್ಯ, ಶಕ್ತಿ ಮತ್ತು ಸುಜ್ಞಾನವನ್ನು ಕರುಣಿಸಲೆಂದು ಪ್ರಾರ್ಥಿಸುತ್ತೇವೆ.

ಇಂದಿನ ಸಭೆಯಲ್ಲಿ ಪಾಲ್ಗೊಂಡು ಒಗ್ಗಟ್ಟಿನಿಂದ ಈ ಅವಿರೋಧ ಆಯ್ಕೆಗೆ ಕಾರಣರಾದ ಸಮಾಜದ ಸಮಸ್ತ ಗೌರವಾನ್ವಿತ ಹಿರಿಯರಿಗೂ ಹಾಗೂ ಬಂಧುಗಳಿಗೂ ಹಾರ್ದಿಕ ಧನ್ಯವಾದಗಳು.

ನೈಜ ಮತದಾರರನ್ನೇ ಗುರಿಯಾಗಿಸಿ ಫಾರ್ಮ್-7 ಸಲ್ಲಿಕೆ, ಎಸ್ಐಟಿ ತನಿಖೆಗೆ ಆಗ್ರಹ

ರಾಯಚೂರು,ಆ.06-

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ () ಪ್ರಕ್ರಿಯೆ ನಡೆಯುತ್ತಿರುವ ಬೆನ್ನಲ್ಲೇ, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಭಾಗ ಸಂಖ್ಯೆ 13ರಲ್ಲಿ ನೈಜ ಹಾಗೂ ಸಕ್ರಿಯ ಮತದಾರರ ವಿರುದ್ಧವೇ ಫಾರ್ಮ್ -7 ಅರ್ಜಿಗಳು ಸಲ್ಲಿಕೆ ಯಾಗಿರುವ ಆರೋಪ ಕೇಳಿಬಂದಿದೆ. ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಉದ್ದೇಶದಿಂದ ಆಧಾರರಹಿತ ಆಕ್ಷೇಪಣೆಗಳನ್ನು ಸಲ್ಲಿಸಲಾಗುತ್ತಿದೆಯೇ ಎಂಬ ಅನುಮಾನ ವ್ಯಕ್ತವಾಗಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗುತ್ತಿದೆ.

ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಸಂಖ್ಯೆ 13ರಲ್ಲಿ ಸುಮಾರು 50 ಫಾರ್ಮ್-7 ಅರ್ಜಿಗಳು ಸಲ್ಲಿಕೆಯಾಗಿದ್ದು, ಅರ್ಜಿಗಳಲ್ಲಿ ಆಕ್ಷೇಪಿಸಲಾದ ಹಲವರು ನೈಜವಾಗಿ ಅದೇ ಪ್ರದೇಶದಲ್ಲಿ ವಾಸವಾಗಿರುವ ಸಕ್ರಿಯ ಮತದಾರರು. ಈ ಪೈಕಿ ಕೆಲ ಅರ್ಜಿಗಳಲ್ಲಿ ನೀಡಿರುವ ಕಾರಣಗಳು ಹಾಗೂ ಅರ್ಜಿ ಸಲ್ಲಿಸಿದವರ ವಿವರಗಳ ಕುರಿತು ಪ್ರಶ್ನೆಗಳು ಉದ್ಭವಿಸಿವೆ.

ಅಮಿತಕುಮಾರ್ ಎಂಬ ವ್ಯಕ್ತಿ ಸ್ಥಳೀಯವಾಗಿ ವಾಸವಿರುವ ಅನ್ವಾರ್ ಎಂಬ ನೈಜ ಮತದಾರರ ವಿರುದ್ಧ ಫಾರಂ-7 ಸಲ್ಲಿಸಿ ಶಾಶ್ವತ ಸ್ಥಳಾಂತ/ಗೈರು ಎಂದು ಕ್ಲಿಕ್ ಮಾಡಿದ್ದು, ಆಕ್ಷೇಪಣೆ ಅರ್ಜಿ ಸಲ್ಲಿಸಿದ ವ್ಯಕ್ತಿಯ ಹೆಸರು, ಮೊಬೈಲ್ ನಂಬರ್ ಬಿಟ್ಟರೆ ಉಳಿದ ಎಲ್ಲವೂ ಪೂರ್ವ ಮುದ್ರಿತ ಅರ್ಜಿಯಾಗಿರುವುದು ಮೇಲ್ನೋಟಕ್ಕೆ ಕಾಣಿಸುತ್ತಿದೆ.

ಅರ್ಜಿ ಸಲ್ಲಿಕೆಯಾದ ಬಳಿಕ ಚುನಾವಣಾ ಅಧಿಕಾರಿಗಳು ಪರಿಶೀಲನೆ ನಡೆಸಿದ ವೇಳೆ ಅನ್ವಾರ್ ಎಂಬುವವರು ನೈಜ ಮತದಾರರು, ಹಲವು ವರ್ಷಗಳಿಂದ ಅದೇ ಪ್ರದೇಶದಲ್ಲಿ ವಾಸವಾಗಿದ್ದು, ಸಕ್ರಿಯ ಮತದಾರರಾಗಿರುವುದು ದೃಢಪಟ್ಟಿದೆ. ಹಲವು ವರ್ಷಗಳಿಂದ ಇದೇ ಪ್ರದೇಶದಲ್ಲಿ ವಾಸವಾಗಿದ್ದು, ಪ್ರತಿಯೊಂದು ಚುನಾವಣೆಯಲ್ಲೂ ಮತದಾನ ಮಾಡಿರುವುದಾಗಿ ಅನ್ವಾರ್ ತಿಳಿಸಿದ್ದಾರೆ.

''ನಾನು ಹಲವು ವರ್ಷಗಳಿಂದ ಇಲ್ಲಿಯೇ ವಾಸವಾಗಿದ್ದೇನೆ. ಇದೇ ಮತಗಟ್ಟೆಯ ಮತದಾರ. ಪ್ರತಿಯೊಂದು ಚುನಾವಣೆಯಲ್ಲೂ ಮತದಾನ ಮಾಡುತ್ತಾ ಬಂದಿದ್ದೇನೆ. ಆದರೆ ಅನಧಿಕೃತ ವ್ಯಕ್ತಿಯೊಬ್ಬರು ನನ್ನ ಮತ ಡಿಲೀಟ್ ಮಾಡುವಂತೆ ಫಾರಂ-7 ಸಲ್ಲಿಸಿರುವುದು ಗೊತ್ತಾಗಿದೆ. ಬಳಿಕ ಬಿಎಲ್ಒ ಅರ್ಜಿ ಪರಿಶೀಲನೆ ನಡೆಸಿದ್ದು, ದೂರು ಆಧಾರರಹಿತವಾಗಿರುವುದರಿಂದ ಅರ್ಜಿಯನ್ನು ರದ್ದುಗೊಳಿಸಲಾಗುವುದು ಎಂದು ತಿಳಿಸಿದ್ದಾರೆ'' ಎಂದು ಅನ್ವಾರ್ ಹೇಳಿದ್ದಾರೆ.

ಎಸ್‌ಡಿಪಿಐ ಮುಖಂಡ ಅತೀಕ್ ಅವರ ಆರೋಪದ ಪ್ರಕಾರ, ಭಾಗ ಸಂಖ್ಯೆ 13ರಲ್ಲಿ ಸುಮಾರು 50 ಫಾರ್ಮ್-7 ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳಲ್ಲಿ ಕೆಲವು ಅರ್ಜಿಗಳ ಹಿಂದೆ ನಿಜವಾದ ಆಕ್ಷೇಪದಾರರೇ ಇದ್ದಾರೆಯೇ ಎಂಬ ಪ್ರಶ್ನೆ ಎದುರಾಗಿದೆ.

ಅನ್ವಾರ್ ವಿರುದ್ಧ ಫಾರಂ-7 ಸಲ್ಲಿಸಿದ ಅಮಿತಕುಮಾರ್ ಅವರನ್ನು ಸಂಪರ್ಕಿಸಿದಾಗ, ನಾವು ಹೊಲ-ಮನೆ ಕೆಲಸ ಮಾಡಿಕೊಂಡು ಜೀವನ ನಡೆಸುವವರು. ಫಾರಂ-7 ಅರ್ಜಿ ಬಗ್ಗೆ ನಮಗೆ ಯಾವುದೇ ಮಾಹಿತಿ ಇಲ್ಲ'' ಎಂದು ಸ್ಪಷ್ಟಪಡಿಸಿದ್ದಾರೆ.

ತಮ್ಮ ಹೆಸರಿನಲ್ಲಿ ಅಥವಾ ತಮ್ಮ ಮೂಲಕ ಅರ್ಜಿ ಸಲ್ಲಿಕೆಯಾಗಿರುವುದೇ ಗೊತ್ತಿಲ್ಲ ಎಂದು ಕೆಲವರು ಹೇಳಿರುವುದು ಪ್ರಕರಣದ ಕುರಿತು ಮತ್ತಷ್ಟು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ನೈಜ ಮತದಾರರನ್ನು ಮತಪಟ್ಟಿಯಿಂದ ಅಳಿಸಲು ಫಾರಂ-7 ಅರ್ಜಿಗಳು ಯಾರು ಸಲ್ಲಿಸಿದರು, ಇವು ಪೂರ್ವ ಮುದ್ರಿತ ಅರ್ಜಿಗಳೇ ಎಂಬುದನ್ನು ಪರಿಶೀಲಿಸಬೇಕೆಂಬ ಒತ್ತಾಯ ಬಲವಾಗಿ ಕೇಳಿಬಂದಿದೆ.

ರಾಯಚೂರು ನಗರ ಕ್ಷೇತ್ರದ ಮುಸ್ಲಿಂ ಬಾಹುಳ್ಯ ಪ್ರದೇಶಗಳಲ್ಲಿ ಮತದಾರರ ಹೆಸರುಗಳನ್ನು

3ನೇ ಪುಟ.....



ಅ.11ರಂದು ಉಚಿತ ಕ್ಯಾನ್ಸರ್ ತಪಾಸಣೆ; ಸಾರ್ವಜನಿಕರಿಗೆ ಕರೆ

ಗಂಗಾವತಿ:

ಎಎಸ್‌ಐ-ಕೆಎಸ್ಸಿ ವಿಜಯನಗರ ಶಾಖೆ, ಭಾರತೀಯ ವೈದ್ಯಕೀಯ ಸಂಘ (ಐಎಂಎ), ಲಯನ್ಸ್ ಕ್ಲಬ್ ಹಾಗೂ ಕರ್ನಾಟಕ ಕ್ಯಾನ್ಸರ್ ಚಿಕಿತ್ಸೆ ಮತ್ತು ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ ಅ.11ರಂದು ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ಐಎಂಎ ಅಧ್ಯಕ್ಷ ಡಾ. ಮಲ್ಲನಗೌಡ ಪಿ. ಪಾಟೀಲ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅ.11ರಂದು ಭಾನುವಾರ ನಗರದ ಐಎಂಎ ಹಾಲ್‌ನಲ್ಲಿ ಬೆಳಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ಶಿಬಿರ ನಡೆಯಲಿದೆ. ಸಾರ್ವಜನಿಕರು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಶಿಬಿರದಲ್ಲಿ ಬಾಯಿ ಕ್ಯಾನ್ಸ,್ ಸ್ತನ ಕ್ಯಾನ್ಸರ್ ಹಾಗೂ ಗರ್ಭಕಂಠದ ಕ್ಯಾನ್ಸರ್ ತಪಾಸಣೆಯನ್ನು ಉಚಿತವಾಗಿ ನಡೆಸಲಾಗುವುದು. ಬಾಯಿಯಲ್ಲಿ ಗುಣವಾಗದ ಹುಣ್ಣು, ಬಿಳಿ ಅಥವಾ ಕೆಂಪು ಮಚ್ಚೆ, ಗಡ್ಡೆ, ನಿರಂತರ ನೋವು ಹಾಗೂ ಕುತ್ತಿಗೆಯಲ್ಲಿ ಗಡ್ಡೆ ಕಂಡುಬಂದರೆ ಬಾಯಿ ಕ್ಯಾನ್ಸರ್ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸ್ತನದಲ್ಲಿ ಗಡ್ಡೆ, ಗಾತ್ರದಲ್ಲಿ ಬದಲಾವಣೆ, ಮೊಲೆತೊಟ್ಟು ಒಳಗೆ ಹೋಗುವುದು, ರಕ್ತಸ್ರಾವ ಅಥವಾ ಚರ್ಮದಲ್ಲಿ ಬದಲಾವಣೆ ಕಂಡುಬಂದರೆ ಸ್ತನ ಕ್ಯಾನ್ಸರ್ ತಪಾಸಣೆ ಅಗತ್ಯವಿದೆ. ಮುಟ್ಟಿನ ನಡುವೆ ಅಸಹಜ ರಕ್ತಸ್ರಾವ, ಲೈಂಗಿಕ ಸಂಪರ್ಕದ ನಂತರ

3ನೇ ಪುಟ.....

ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತೇವೆ: ಬಿ.ಎಸ್. ಯಡಿಯೂರಪ್ಪ



ಕಲಬುರಗಿ,ಅ.05-

ಮುಂಬರುವ ಎಲ್ಲಾ ಚುನಾವಣೆಗಳಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಾಗಿ ಚುನಾವಣೆ ಎದುರಿಸಲಿವೆ. ಈ ಮೈತ್ರಿಯಿಂದ ಹೆಚ್ಚಿನ ಸ್ಥಾನಗಳನ್ನು ಗೆದ್ದು ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದ್ದೇವೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮುಂದಿನ ವಿಧಾನಸಭಾ ಚುನಾವಣೆಯಲ್ಲೂ ಎರಡೂ ಪಕ್ಷಗಳು ಒಗ್ಗಟ್ಟಿನಿಂದ ಚುನಾವಣೆ ಎದುರಿಸಲಿವೆ ಎಂದು ಹೇಳಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಶಿಲ್ ನಮೋಶಿ ಅವರ ನಾಮಪತ್ರ ಸಲ್ಲಿಕೆ ಹಿನ್ನೆಲೆಯಲ್ಲಿ ಕಲಬುರಗಿಗೆ ಆಗಮಿಸಿದ್ದ ಯಡಿಯೂರಪ್ಪ, ರಾಜ್ಯದ ಶಿಕ್ಷಣ ವ್ಯವಸ್ಥೆ ಸೇರಿದಂತೆ ಹಲವು ವಿಚಾರಗಳ ಕುರಿತು ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಶಿಕ್ಷಕರ ಹಲವು ಹುದ್ದೆಗಳು ಖಾಲಿ ಉಳಿದಿವೆ. ಶಿಕ್ಷಕರು ಹಾಗೂ ಅಧ್ಯಾಪಕರಿಗೆ ವೇತನ ಸರಿಯಾಗಿ ದೊರೆಯುತ್ತಿಲ್ಲ. ಮಕ್ಕಳಿಗೆ ನೀಡುವ ಶೂ ಮತ್ತು ಸಾಕ್ಸ್ ಗಳಲ್ಲೂ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ ಅವರು, ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಸರ್ಕಾರ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಶಿಲ್ ನಮೋಶಿ ಅವರಿಗೆ ಬೆಂಬಲ ನೀಡುವಂತೆ ಶಿಕ್ಷಕರಲ್ಲಿ ಮನವಿ ಮಾಡಿದ ಯಡಿಯೂರಪ್ಪ, ಶಿಕ್ಷಕರ ಸಮಸ್ಯೆಗಳನ್ನು ವಿಧಾನ ಪರಿಷತ್ತಿನಲ್ಲಿ ಪರಿಣಾಮಕಾರಿಯಾಗಿ ಪ್ರಸ್ತಾಪಿಸಲು ತಮ್ಮ ಅಭ್ಯರ್ಥಿಯನ್ನು ಬೆಂಬಲಿಸಬೇಕು ಎಂದು ಹೇಳಿದರು.

ರೈತರಿಗೆ ನೀಡುವುದಾಗಿ ಹೇಳಿದ್ದ 2,500 ರೂ. ಎಲ್ಲಿ?

ರೈತರಿಗೆ 2,500 ರೂ. ನೀಡುವುದಾಗಿ ಕಾಂಗ್ರೆಸ್ ಸರ್ಕಾರ ಹೇಳಿತ್ತು. ಆದರೆ ಇದುವರೆಗೆ ನಯಾಪೈಸೆಯನ್ನೂ ನೀಡಿಲ್ಲ ಎಂದು ಯಡಿಯೂರಪ್ಪ ಅವರು ಆರೋಪಿಸಿದರು.

ಸಿಎಂ ಡಿ.ಕೆ.ಶಿವಕುಮಾರ್ ಅವರು ಹಣಬಲದ ಮೇಲೆ ಚುನಾವಣೆ ಗೆಲ್ಲಬಹುದು ಎಂಬ ವಿಶ್ವಾಸದಲ್ಲಿದ್ದಾರೆ. ಹಣಬಲದ ಜತೆಗೆ ಜಾತಿ-ಜಾತಿಗಳ ನಡುವೆ ಸಂಘರ್ಷ ಸೃಷ್ಟಿಸಿ ಚುನಾವಣೆ ಗೆಲ್ಲಲು ಕಾಂಗ್ರೆಸ್ ಮುಂದಾಗಿದೆ ಎಂದು ಅವರು ಆರೋಪಿಸಿದರು.

2028ರ ವಿಧಾನಸಭಾ ಚುನಾವಣೆಯ ಬಳಿಕ ತಾನೇ ಮುಖ್ಯಮಂತ್ರಿ ಆಗುವುದಾಗಿ ಡಿ.ಕೆ.ಶಿವಕುಮಾರ್ ನೀಡಿರುವ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಯಡಿಯೂರಪ್ಪ, ಡಿ.ಕೆ.ಶಿವಕುಮಾರ್ ಅವರು ಹಣಬಲದ ಮೂಲಕ ಅಧಿಕಾರಕ್ಕೆ ಬರಲು ಕನಸು ಕಂಡಿದ್ದಾರೆ. ಮುಂದೆ ಯಾರ ಕೈಗೆ ಅಧಿಕಾರ ನೀಡಲಿದ್ದಾರೆ ಎನ್ನುವುದು ಜನರು ತೀರ್ಮಾನ ಮಾಡುತ್ತಾರೆ; ಹಣದ ಮದದಲ್ಲಿರುವವರು ಅಲ್ಲ ಎಂದು ಹೇಳಿದರು.

ಬಿಜೆಪಿ-ಜೆಡಿಎಸ್ ಮೈತ್ರಿ ಅಧಿಕಾರಕ್ಕೆ ಬಂದರೆ ಕುಮಾರಸ್ವಾಮಿ ಅವರು ಮುಂದಿನ ಮುಖ್ಯಮಂತ್ರಿ ಆಗಲಿದ್ದಾರೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಯಡಿಯೂರಪ್ಪ, ಬಿಜೆಪಿ-ಜೆಡಿಎಸ್ ಮೈತ್ರಿ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದೆ. ಸಿಎಂ ಯಾರನ್ನು ಮಾಡಬೇಕು ಎನ್ನುವುದು ಮೈತ್ರಿಕೂಟದ ನಾಯಕರು ಈ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದರು.

ಪೈಲಟ್ ಸ್ಮಿತ್‌ಗೆ ಭಾರತ ರತ್ನ ನೀಡುವಂತೆ ಮನವಿ:

ದೇಶದ ಹೆಮ್ಮೆಯ ಪೈಲಟ್ ಸ್ಮಿತ್ ಮಚ್ಚರ ಅವರಿಗೆ ಭಾರತ ರತ್ನ ನೀಡಬೇಕು ಎಂಬುದು ತಮ್ಮ ಅಭಿಪ್ರಾಯವಾಗಿದ್ದು, ಈ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರ ಬಳಿ ಮನವಿ ಮಾಡುವುದಾಗಿ ಯಡಿಯೂರಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಎನ್.ಡಿ.ಎ ಒಕ್ಕೂಟದ ಅಭ್ಯರ್ಥಿ, ಹಾಲಿ ಎಂಎಲ್ಸಿ ಶಶೀಲ್ ನಮೋಶಿ, ಬಂಡೆಪ್ಪ ಖಾಶೆಂಪುರ್ ಬಸವರಾಜ ಮತ್ತಿಮಡು, ಸುನೀಲ್ ವಲ್ಯಾಪುರೆ, ಅವಿನಾಶ್ ಜಾಧವ್, ಬಿ.ಜಿ ಪಾಟೀಲ್, ಜಗದೇವ ಗುತ್ತೇದಾರ್ ನಾಸೀರ್ ಹುಸೇನ್ ಉಸ್ತಾದ್, ರಾಜಕುಮಾರ ಪಾಟೀಲ್, ನಿತಿನ್ ಗುತ್ತೇದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಜೇವರ್ಗಿಯಲ್ಲಿ ಪ್ರತಿಭಟನೆ: ಪ್ರಕ್ರಿಯೆ ಸ್ಥಗಿತಕ್ಕೆ ಆಗ್ರಹ

ಜೇವರ್ಗಿ,ಅ.06-

ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ, ಪಟ್ಟಣದಲ್ಲಿ ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಶುಕ್ರವಾರ ಸಂಜೆ ಪ್ರತಿಭಟನೆ ನಡೆಸಲಾಯಿತು. ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸಬೇಕು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಬೇಕು ಹಾಗೂ ಎಸ್‌ಐಆರ್‌ಗೂ ಮುನ್ನ ಇದ್ದ ಮತದಾರರ ಪಟ್ಟಿಯನ್ನು ಪುನರ್‌ಸ್ಥಾಪಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಪ್ರತಿಕೃತಿಯ ಶವಯಾತ್ರೆಯನ್ನು ಅಂಬೇಡ್ಕರ್ ಭವನದಿಂದ ಬಸವೇಶ್ವರ ವೃತ್ತದವರೆಗೆ ಮೆರವಣಿಗೆ ನಡೆಸಲಾಯಿತು. ಬಳಿಕ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಲಾಯಿತು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ಲದೆ, ಮುಖ್ಯ ಚುನಾವಣಾ ಆಯುಕ್ತರನ್ನು ಕೂಡಲೇ ವಜಾಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ನಂತರ ಪ್ರತಿಭಟನಾಕಾರರು ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ರಾಷ್ಟ್ರಪತಿಗಳಿಗೆ ಜೇವರ್ಗಿ ತಹಶೀಲ್ದಾರ್ ಅವರ ಮೂಲಕ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಮಹೇಶ್ ಕುಮಾರ್ ರಾಠೋಡ್, ಬಾಬು ಪಾಟೀಲ, ಅಡ್ವಕೇಟ್ ಮೊಹಿದ್ದಿನ್ ಇನಾಮ್ದಾರ್ ಇಬ್ರಾಹಿಂ ಪಟೇಲ್ ಯಾಳವಾರ, ಸಿದ್ದರಾಮ ಕಟ್ಟಿ, ಸಿದ್ದು ಕೆರೂರ್ ರಾಜಾ ಪಟೇಲ್, ಅಜೀಜ್ ಪಟೇಲ್, ಇಬ್ರಾಹಿಂ ಪಟೇಲ್ ಜೇವರ್ಗಿ, ಭೀಮರಾಯ ನಗನೂರು, ಹಬೀಬ್ ಸಾಬ್ ಜಮಾದಾರ್ ಶರಿಹರಿ ಕರ್ಕಿಹಳಿ, ವಜೀರ್ ಪಟೇಲ್ ಸೇರಿದಂತೆ ಪ್ರಗತಿಪರ ಸಂಘಟನೆಗಳ ಮುಖಂಡರು, ಹೋರಾಟಗಾರರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್ ಆರೋಪ: ಶಿವಸೇನಾ ಪಕ್ಷದ ರಾಜ್ಯಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ



ಕಲಬುರಗಿ,ಅ.06-

ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹಾಗೂ ಮಾನಹಾನಿಕರ ಪೋಸ್ಟ್‌ಗಳನ್ನು ಪ್ರಕಟಿಸಿ, ಪತ್ರಿಕಾಗೋಷ್ಠಿಯಲ್ಲಿ ನಿಂದನಾತ್ಮಕ ಹೇಳಿಕೆ ನೀಡಿ ಜೀವ ಬೆದರಿಕೆ ಹಾಕಿದ್ದಾರೆ ಎಂಬ ಆರೋಪದಲ್ಲಿ ಶಿವಸೇನಾ ಪಕ್ಷದ ರಾಜ್ಯಾಧ್ಯಕ್ಷ ಹಾಗೂ ಪ್ರಧಾನ ಕಾರ್ಯದರ್ಶಿಯ ವಿರುದ್ಧ ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶಿವಸೇನಾ ಪಕ್ಷದ ರಾಜ್ಯಾಧ್ಯಕ್ಷ ಸಿದಲಿಂಗಯ್ಯ ಕರುಣಯ್ಯ ಗದ್ದುಗೆ (ಅಂದೋಲಾ ಶ್ರೀ) ಹಾಗೂ ಸಿದ್ರಾಮಯ್ಯ ಹಿರೇಮಠ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಅಫಜಲಪುರ ಪಟ್ಟಣದ ಲಕ್ಷ್ಮೀಗುಡಿ ಸಮೀಪದ ನಿವಾಸಿ ನಾಗಪ್ಪ ಫತ್ತರಗಿ (38) ಎಂಬವರು ನೀಡಿರುವ ದೂರಿನಂತೆ ಆರೋಪಿಗಳ ವಿರುದ್ಧ ಪ್ರಕರಣ ದಾಖಲಾಗಿದೆ.

ಕೋಲಿ-ಕಬ್ಬಲಿಗ ಎಸ್ಟಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಹಾಗೂ ಎಪಿಎಂಸಿ ಮಾಜಿ ನಿರ್ದೇಶಕ ಲಚ್ಚಪ್ಪ ಎಸ್. ಜಮಾದಾರ ಬಗ್ಗೆ ಸೆ.3 ಮತ್ತು 4ರಂದು ಶಿವಸೇನಾ ಪಕ್ಷಹೆಸರಿನ ಫೇಸ್ ಬುಕ್ ಖಾತೆಯಿಂದ ಅವಹೇಳನಕಾರಿ ಪೋಸ್ಟ್ ಪ್ರಕಟಿಸಲಾಗಿದೆ ಎಂದು ನಾಗಪ್ಪ ಪೊಲೀಸ್ ದೂರಿನಲ್ಲಿ ಆರೋಪಿಸಿದ್ದಾರೆ.

ರೈತರ ಪರ ನಡೆಯುತ್ತಿದ್ದ ಹೋರಾಟದಲ್ಲಿ ಭಾಗಿಯಾಗಿದ್ದ ಲಚ್ಚಪ್ಪ ಎಸ್. ಜಮಾದಾರ ಹಾಗೂ ಜಿಲ್ಲಾಧಿಕಾರಿ ಇರುವ ಛಾಯಾಚಿತ್ರವನ್ನು ಬಳಸಿ ಅವಹೇಳನಕಾರಿ ಶೀರ್ಷಿಕೆಯೊಂದಿಗೆ ಪೋಸ್ಟ್ ಪ್ರಕಟಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಅದೇ ರೀತಿ, ರಾಜ್ಯ ಗೃಹಸಚಿವ ಪ್ರಿಯಾಂಕ್ ಖರ್ಗೆಯವರ ಛಾಯಾಚಿತ್ರವನ್ನು ಬಳಸಿಕೊಂಡು ಅವಹೇಳನಕಾರಿ ಹಾಗೂ ಮಾನಹಾನಿಕರ ಅರ್ಥ ಬರುವ ರೀತಿಯಲ್ಲಿ ಮತ್ತೊಂದು ಪೋಸ್ಟ್ ಪ್ರಕಟಿಸಲಾಗಿದೆ ಎಂದು ಆರೋಪಿಸಲಾಗಿದೆ. ಸಿದ್ದು ಅಲಿಯಾಸ್ ಸಿದ್ರಾಮಯ್ಯ ಹಿರೇಮಠ ಅವರ ಫೇಸ್ ಬುಕ್ ಖಾತೆಯಲ್ಲೂ ಅವಹೇಳನಕಾರಿ ಪದಗಳು ಹಾಗೂ ಚಿತ್ರಗಳನ್ನು ಬಳಸಿ ಪೋಸ್ಟ್ ಹರಿಯಬಿಡಲಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟವಾದ ಪೋಸ್ಟ್ ಗಳು ಹಾಗೂ ಸುದ್ದಿಗೋಷ್ಠಿಯಲ್ಲಿ ನೀಡಿದ ಹೇಳಿಕೆಗಳಿಂದ ಲಚ್ಚಪ್ಪ ಎಸ್. ಜಮಾದಾರ ಅವರ ಸಾಮಾಜಿಕ ಗೌರವ ಮತ್ತು ಪ್ರತಿಷ್ಠೆಗೆ ಧಕ್ಕೆ ಉಂಟಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ. ಈ ಕುರಿತು ಅಫ್ಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಕೆಬಿಎನ್ ವಿವಿಯಲ್ಲಿ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಆದ್ಯತೆ

ಕಲಬುರಗಿ,ಅ,05-

ಕ್ರೀಡೆಯಿಂದ ಮಾನಸಿಕ ಹಾಗೂ ದೈಹಿಕ ಬೆಳವಣಿಗೆ ಸಾಧ್ಯವಾಗುತ್ತದೆ. ಒತ್ತಡದ ಬದುಕಿನ ನಡುವೆ ಮನಸ್ಸನ್ನು ಉಲ್ಲಾಸಗೊಳಿಸಲು ಕ್ರೀಡೆ ಪರಿಣಾಮಕಾರಿ ಸಾಧನವಾಗಿದೆ. ಕೆಬಿಎನ್ ವಿವಿಯು ವಿವಿಧ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ವಿವಿಯ ಸಮ-ಉಪಕುಲಪತಿ ಪ್ರೊ. ಅಶ್ಫಾಕ್ ಅಹ್ಮದ್ ಹೇಳಿದರು.

ಖ್ವಾಜಾ ಬಂದಾನವಾಜ ವಿಶ್ವವಿದ್ಯಾಲಯದಲ್ಲಿ ಸೋಮವಾರ ಆಯೋಜಿಸಿದ್ದ ಕ್ರೀಡೆ ಮತ್ತು ಸಾಂಸ್ಕೃತಿಕ ಹಬ್ಬ-2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಕೆಬಿಎನ್ ಟರ್ಫ್ ಅಂತಾರಾಷ್ಟ್ರೀಯ ಮಟ್ಟದ ಸೌಲಭ್ಯಗಳನ್ನು ಹೊಂದಿದೆ. ವಿಶ್ವವಿದ್ಯಾಲಯದ ಕುಲಾಧಿಪತಿ ಡಾ. ಸಯ್ಯದ್ ಮುಹಮ್ಮದ್ ಅಲಿ ಅಲ್ ಹುಸ್ಸೇನಿ ಅವರು ಕ್ರೀಡೆಗಳಿಗೆ ವಿಶೇಷ ಆಸಕ್ತಿ ಹಾಗೂ ಪ್ರೋತ್ಸಾಹ ನೀಡುತ್ತಿದ್ದಾರೆ. ಕ್ರೀಡೆಗಳು ಮನಸ್ಸನ್ನು ತಾಜಾಗೊಳಿಸುವುದರ ಜತೆಗೆ ಒಟ್ಟಾರೆ ಆರೋಗ್ಯವನ್ನು ಸುಧಾರಿಸುತ್ತವೆ. ಕ್ರೀಡಾಂಗಣಕ್ಕೆ ಪ್ರವೇಶಿಸಿದಾಗ ಒತ್ತಡ ಕಡಿಮೆಯಾಗಿ, ಹೊಸ ಉತ್ಸಾಹ ಮೂಡುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಆಯೋಜನೆಗೆ ಶ್ರಮಿಸಿದ ಎಲ್ಲರನ್ನು ಅಭಿನಂದಿಸಿದ ಅವರು, ಇಂತಹ ಕಾರ್ಯಕ್ರಮಗಳು ತಂಡದ ಮನೋಭಾವವನ್ನು ಬೆಳೆಸುವಲ್ಲಿ ಸಹಕಾರಿಯಾಗುತ್ತವೆ. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವ ಎಲ್ಲ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ವಿಶ್ವವಿದ್ಯಾಲಯದ ಕುಲಸಚಿವ ಮಿರ್ ವಿಲಾಯತ್ ಅಲಿ ಮಾತನಾಡಿ, ಆಟಗಳಲ್ಲಿ ಗೆಲ್ಲುವುದು ಅಥವಾ ಸೋಲುವುದು ಮುಖ್ಯವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬರೂ ವಿಜೇತರೇ. ನಿಜವಾದ ಗೆಲುವು ಎಂದರೆ ಭಾಗವಹಿಸುವಿಕೆ ಎಂದು ಹೇಳಿದರು.

ವಿದ್ಯಾರ್ಥಿಗಳ ಪರಿಪೂರ್ಣ ಬೆಳವಣಿಗೆಗೆ ಇಂತಹ ಅವಕಾಶಗಳು ಅಗತ್ಯವಾಗಿವೆ. ಕ್ಯಾಂಪಸ್ ನಿರ್ದೇಶಕ ಜನಾಬ್ ಡಾ. ಸಯ್ಯದ್ ಮುಸ್ತಫಾ ಹುಸ್ಸೇನಿ ಅವರು ಕೂಡ ವಿದ್ಯಾರ್ಥಿಗಳನ್ನು ನಿರಂತರವಾಗಿ ಪ್ರೋತ್ಸಾಹಿಸುತ್ತಿದ್ದಾರೆ. ಕೆಬಿಎನ್ ಟರ್ಫ್ ಮೈದಾನದಲ್ಲಿ ಕ್ರಿಕೆಟ್, ಫುಟ್ಬಾಲ್ ಹಾಗೂ ಹಾಕಿ ಸೇರಿದಂತೆ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗುತ್ತಿದೆ. ಇನ್ನೂ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಬರುವ ನವೆಂಬರ್‌ನಿಂದ ಕೆಬಿಎನ್ ಗೋಲ್ಡ್ ಕಪ್ ಆರಂಭವಾಗಲಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕ್ರೀಡಾ ಜ್ಯೋತಿಯ ಸಂಚಾರದ ಬಳಿಕ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಆರು ದಿನಗಳ ಕಾಲ ನಡೆಯಲಿರುವ ಕ್ರೀಡೆ ಮತ್ತು ಸಾಂಸ್ಕೃತಿಕ ಹಬ್ಬದಲ್ಲಿ ಕ್ಯಾರಂ, ಚೆಸ್, ಬ್ಯಾಡ್ಮಿಂಟನ್, ವಾಲಿಬಾಲ್, ಥ್ರೋಬಾಲ್, ಶಾಟ್‌ಪುಟ್ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ಹಾಗೂ ರಂಗೋಲಿ, ಮೆಹಂದಿ, ಪೇಂಟಿಂಗ್, ಪೋಸ್ಟರ್ ತಯಾರಿ, ಗಾಯನ ಮತ್ತು ನೃತ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಕಲ್ಯಾಣ ಡೀನ್ ಡಾ. ಅನೂಪ್ ಸ್ವಾಗತಿಸಿದರು. ಸಹಾಯಕ ಪ್ರಾಧ್ಯಾಪಕ ಡಾ. ಮರೂಫ್ ವಂದಿಸಿದರು. ವಿದ್ಯಾರ್ಥಿಗಳಾದ ಆಯೇಷಾ ಫಾತಿಮಾ ಹಾಗೂ ಸನಾ ಮೆಹಕ್ ನಿರೂಪಿಸಿದರು. ಸ್ಟೂಡೆಂಟ್ ಕೌನ್ಸಿಲ್ ಕುರಿತು ವೈದ್ಯಕೀಯ ವಿದ್ಯಾರ್ಥಿ ಅಫ್ರೋಜ್ ಪರಿಚಯ ನೀಡಿದರು.

ಕೆಬಿಎನ್ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಅಕಾಡೆಮಿಕ್ ಡೀನ್ ಡಾ. ಜಮಾ ಮೂಸ್ವಿ, ಮೆಡಿಕಲ್ ಡೀನ್ ಡಾ. ಗುರುಪ್ರಸಾದ್, ಐಕ್ಯೂಎಸಿ ನಿರ್ದೇಶಕ ಡಾ. ಅಬ್ದುಲ್ ಬಸೀರ್ ಎಂಜಿನಿಯರಿಂಗ್ ಡೀನ್ ಪ್ರೊ. ಸುಭಾಷ್ ಕಮಲ್, ಶಿಕ್ಷಣ ಡೀನ್ ಮೊಹಮ್ಮದ್ ಇಕ್ಬಾಲ್, ವಾಣಿಜ್ಯ ಡೀನ್ ಪ್ರೊ. ಶ್ರೀನಿವಾಸ್ ಸೇರಿದಂತೆ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಲಕ್ಷ್ಮೀಪುತ್ರ ಕಿರನಳ್ಳಿ ಅವರಿಗೆ ಸನ್ಮಾನ



ಅಫಜಲಪುರ,ಅ.06-

ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಕೊಡಮಾಡುವ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ, ಅಫಜಲಪುರ ತಾಲೂಕು ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಅವರನ್ನು ಸನ್ಮಾನಿಸಲಾಯಿತು.

ಬಳಿಕ ಅಫಜಲಪುರ ಪಟ್ಟಣದ ಓಂ ಆಸ್ಪತ್ರೆಯ ಮಕ್ಕಳ ವೈದ್ಯ ಡಾ. ಪ್ರಭಾಕರ ಥಂಗಾಪೂರೆ ಮಾತನಾಡಿ, ಶಿಕ್ಷಕರು ಸಮಾಜವನ್ನು ಕಟ್ಟುವ ಶಿಲ್ಪಿಗಳಾಗಿದ್ದು, ಎಲ್ಲ ವೃತ್ತಿಗಳಲ್ಲಿಯೂ ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಶಿಕ್ಷಣ ಕ್ಷೇತ್ರದಲ್ಲಿ ಕ್ರಿಯಾಶೀಲವಾಗಿ ಸೇವೆ ಸಲ್ಲಿಸುತ್ತಿರುವ ಲಕ್ಷ್ಮೀಪುತ್ರ ಕಿರನಳ್ಳಿ ಅವರು ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಲಕ್ಷ್ಮೀಪುತ್ರ ಕಿರನಳ್ಳಿ, ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಪ್ರಶಸ್ತಿ ನೀಡಿರುವುದು ತಮ್ಮ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಸ್ನೇಹಿತರ ಸಲಹೆ ಹಾಗೂ ಸಿಬ್ಬಂದಿಯ ಸಹಕಾರದೊಂದಿಗೆ ಮುಂದೆಯೂ ನಿರಂತರವಾಗಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಸಂಘದ ಅಧ್ಯಕ್ಷ ರಮೇಶ ಜೇವರಗಿ, ಪ್ರಧಾನ ಕಾರ್ಯದರ್ಶಿ ಬಸವರಾಜ ಪುಲಾರಿ, ಮುಖ್ಯ ಶಿಕ್ಷಕ ಮಹಾಂತೇಶ ಹಲಗಡಲಿ, ಶಿಕ್ಷಕರಾದ ಚಂದ್ರಕಾಂತ ದೇವರಮನಿ, ಯಲ್ಲಪ್ಪ ತಳವಾರ, ಶಿವಶರಣ ವಾಲೆ, ಭೀಮಣ್ಣ ಕಲಬುರಗಿ ಹಾಗೂ ಜಕ್ಕಪ್ಪ ಉಪಸ್ಥಿತರಿದ್ದರು.

ಸಮಯಕ್ಕೆ ಸರಿಯಾಗಿ ಕಚೇರಿಗೆ ಹಾಜರಾಗಬೇಕು : ಜಿಪಂ ಸಿಇಒ ಗಿತ್ತೆ ಮಾಧವ್ ಸೂಚನೆ

ಬೀದರ್,ಅ.06-

ಕಮಲನಗರ ತಾಲೂಕಿನ ಮದನೂರ ಗ್ರಾಮ ಪಂಚಾಯಿತಿಗೆ ಜಿಲ್ಲಾ ಪಂಚಾಯಿತಿ ಸಿಇಒ ಗಿತ್ತೆ ಮಾಧವ್ ವಿಠ್ಠಲರಾವ್ ಅವರು ಸೋಮವಾರ ಭೇಟಿ ನೀಡಿ, ಪಂಚಾಯಿತಿಯಲ್ಲಿ ಪಿಡಿಒ ಸಮಯಕ್ಕೆ ಸರಿಯಾಗಿ ಹಾಜರಿರಬೇಕು. ಎಲ್ಲ ಸಿಬ್ಬಂದಿಯೂ ನಿಗದಿತ ಸಮಯಕ್ಕೆ ಕಚೇರಿಗೆ ಹಾಜರಾಗಬೇಕು ಎಂದು ಸೂಚಿಸಿದರು.

ಮದನೂರ ಪಂಚಾಯಿತಿ ವ್ಯಾಪ್ತಿಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಟಿಕ ಆಹಾರ, ಕಲಿಕಾ ಸಾಮಗ್ರಿಗಳು ಹಾಗೂ ಕೇಂದ್ರದಲ್ಲಿರುವ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ನಂತರ ಗ್ರಾಮದ ಗ್ರಂಥಾಲಯಕ್ಕೆ ಭೇಟಿ ನೀಡಿ, ಕಟ್ಟಡ ಹಾಗೂ ಗ್ರಂಥಾಲಯದಲ್ಲಿ ಸಮರ್ಪಕ ವ್ಯವಸ್ಥೆಗಳಿಲ್ಲದಿರುವುದನ್ನು ಗಮನಿಸಿದರು. ಈ ಹಿನ್ನೆಲೆಯಲ್ಲಿ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡ ಅವರು, ಗ್ರಾಮೀಣ ಭಾಗದ ಜನರು ಹಾಗೂ ವಿದ್ಯಾರ್ಥಿಗಳಿಗೆ ಓದು ಮತ್ತು ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಖತಗಾಂವ್ ಗ್ರಾಮದಲ್ಲಿ



ನಡೆಯುತ್ತಿದ್ದ ಸಿಸಿಟಿ ಕಾಮಗಾರಿಯನ್ನು ವೀಕ್ಷಿಸಿದ ಅವರು, ಸ್ಥಳದಲ್ಲೇ ಸ್ವತಃ ಮಣ್ಣು ಅಗೆದು ಬುಟ್ಟಿಗೆ ತುಂಬುವ ಮೂಲಕ ಕೂಲಿ ಕಾರ್ಮಿಕರಿಗೆ ಉತ್ತೇಜನ ನೀಡಿದರು.

ಈ ವೇಳೆ ಕೂಲಿ ಕಾರ್ಮಿಕರೊಂದಿಗೆ ಕಾಮಗಾರಿ ಕುರಿತು ಚರ್ಚಿಸಿದ ಅವರು, ಕೆಲವು ತಾಂತ್ರಿಕ ಸಮಸ್ಯೆಗಳಿಂದ ಕೂಲಿ ಪಾವತಿ ತಡವಾಗಿತ್ತು. ಇದೀಗ ಸಮಸ್ಯೆ ಬಗೆಹರಿದಿದ್ದು, ಎಲ್ಲರಿಗೂ ಸಮಯಕ್ಕೆ ಸರಿಯಾಗಿ ಕೂಲಿ ಪಾವತಿಸಲಾಗುವುದು ಎಂದು ತಿಳಿಸಿದರು. ಹೆಚ್ಚಿನ ಜನರನ್ನು ಕೂಲಿ ಕೆಲಸಕ್ಕೆ ಕರೆತರಬೇಕು. ಕೂಲಿ ಪಾವತಿ ಕುರಿತು ಯಾವುದೇ ಆತಂಕ ಪಡಬೇಡಿ, ಸಮಯಕ್ಕೆ ಸರಿಯಾಗಿ ಕೂಲಿ ನೀಡಲಾಗುವುದು ಎಂದು ಭರವಸೆ ನೀಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೂ ಭೇಟಿ ನೀಡಿದ ಅವರು, ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಊಟದ ಗುಣಮಟ್ಟ, ಕುಡಿಯುವ ನೀರು, ಶೌಚಾಲಯ ಹಾಗೂ ಮೂಲಸೌಕರ್ಯಗಳ ಸ್ವಚ್ಛತೆಯನ್ನು ಪರಿಶೀಲಿಸಿದರು. ಬಳಿಕ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಅವರ ಶೈಕ್ಷಣಿಕ ಪ್ರಗತಿ ಹಾಗೂ ವಸತಿ ನಿಲಯದಲ್ಲಿನ ಸೌಲಭ್ಯಗಳ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ, ಪಿಡಿಒ ಅನಿತಾ, ಡಿಇಒ ಮಹೇಶ್, ಕರ ವಸೂಲಿಗಾರ ರಾಹುಲ್, ಟಿಎ ವಿರೂಪಾಕ್ಷ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

ನಕಲಿ ಅಂಕಪಟ್ಟಿ ಸಲ್ಲಿಸಿ ಸರಕಾರಿ ಉದ್ಯೋಗ ಪಡೆದ ನೌಕರರ ಬಂಧನಕ್ಕೆ ಆಗ್ರಹ



ಯಾದಗಿರಿ,ಅ.06-

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಶೇಷ ನೇಮಕಾತಿಯಲ್ಲಿ ನಕಲಿ ಎಸೆಸೆಲ್ಸಿ ಅಂಕಪಟ್ಟಿ ಸಲ್ಲಿಸಿ ಡಿ ಗ್ರೂಪ್ ಹುದ್ದೆ ಪಡೆದಿರುವ ಆರೋಪದಡಿ ಅಮಾನತುಗೊಂಡಿರುವ ನೌಕರರನ್ನು ತಕ್ಷಣವೇ ಸೇವೆಯಿಂದ ವಜಾಗೊಳಿಸಿ, ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಬಂಧಿಸಬೇಕು ಎಂದು ಸಮಾಜಸೇವಾ ಕಾರ್ಯಕರ್ತರ ವೇದಿಕೆಯ ರಾಜ್ಯ ಕಾರ್ಯದರ್ಶಿ ಮನೋಜ್ ಕುಮಾರ್ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಸೆ. 22ರ ಅಮಾನತು ಆದೇಶದಿಂದ ನಕಲಿ ಶೈಕ್ಷಣಿಕ ದಾಖಲೆಗಳ ಪ್ರಕರಣ ಬೆಳಕಿಗೆ ಬಂದಿದೆ. ಅರ್ಹತೆ ಹೊಂದಿದ್ದರೂ ಸರ್ಕಾರಿ ಉದ್ಯೋಗದಿಂದ ವಂಚಿತರಾಗಿರುವ ಲಕ್ಷಾಂತರ ನಿರುದ್ಯೋಗಿ ಯುವಕರಿಗೆ ಇದರಿಂದ ಅನ್ಯಾಯವಾಗಿದೆ ಎಂದು ಹೇಳಿದರು.

ನಕಲಿ ದಾಖಲೆಗಳ ಮೂಲಕ ಸರ್ಕಾರಿ ಸೇವೆ ಪಡೆದಿರುವವರನ್ನು ಕೇವಲ ಅಮಾನತುಗೊಳಿಸುವುದರಿಂದ ಯಾವುದೇ ಪ್ರಯೋಜನವಿಲ್ಲ. ಅವರನ್ನು ಕಾಯಂ ಸೇವೆಯಿಂದ ವಜಾಗೊಳಿಸಿ, ನಕಲಿ ದಾಖಲೆ ಸೃಷ್ಟಿ ಹಾಗೂ ವಂಚನೆ ಆರೋಪದಡಿ ಎಫ್‌ಐಆರ್ ದಾಖಲಿಸಿ ಬಂಧಿಸಬೇಕು ಎಂದು ಒತ್ತಾಯಿಸಿದರು.

ಅವರು ಸೇವೆಗೆ ಸೇರಿದ ದಿನದಿಂದ ಪಡೆದಿರುವ ವೇತನ ಹಾಗೂ ಇತರೆ ಸೌಲಭ್ಯಗಳನ್ನು ಕಾನೂನುಬದ್ಧವಾಗಿ ಬಡ್ಡಿ ಸಮೇತ ವಸೂಲಿ ಮಾಡಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ದಾಖಲೆಗಳ ಪರಿಶೀಲನೆ ನಡೆಸದೇ ನಕಲಿ ಅಂಕಪಟ್ಟಿಗಳನ್ನು ಅಂಗೀಕರಿಸಿ ನೇಮಕಾತಿ ಮಾಡಿದ ಆಯ್ಕೆ ಸಮಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಪಾತ್ರದ ಬಗ್ಗೆಯೂ ಸಮಗ್ರ ತನಿಖೆ ನಡೆಸಬೇಕು. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧವೂ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ವಿಶೇಷ ನೇಮಕಾತಿಯಡಿ ರಾಜ್ಯಾದ್ಯಂತ ನಡೆದಿರುವ ನೇಮಕಾತಿಗಳನ್ನೂ ಉನ್ನತ ಮಟ್ಟದ ತನಿಖೆಗೆ ಒಳಪಡಿಸಬೇಕು ಎಂದು ಹೇಳಿದರು.

ನಕಲಿ ದಾಖಲೆಗಳ ಮೂಲಕ ನೇಮಕಗೊಂಡಿರುವ ನೌಕರರನ್ನು ಕೇವಲ ಅಮಾನತುಗೊಳಿಸಿ ಬೇರೆಡೆಗೆ ಲೀನ್ ವರ್ಗಾವಣೆ ಮಾಡುವ ಮೂಲಕ ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನ ನಡೆಸಿದರೆ, ಅರ್ಹ ನಿರುದ್ಯೋಗಿ ಯುವಕರನ್ನು ಸಂಘಟಿಸಿ ಇಲಾಖೆಯ ವಿರುದ್ಧ ಉಗ್ರ ಹೋರಾಟ ನಡೆಸಲಾಗುವುದು. ರಾಜ್ಯಾದ್ಯಂತ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ ಎಂ., ವೀರೇಶ ಮಠನ್, ಪರಶುರಾಮ ಗಡೇರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ದೌರ್ಜನ್ಯ ಪ್ರಕರಣ ನಿಯಂತ್ರಣ ಸಮಿತಿ ಸಭೆ

ಕುರಿತು ಜಾಗೃತಿ ಮೂಡಿಸುವ ಕೆಲಸ ಅಧಿಕಾರಿಗಳು ಮಾಡಬೇಕು. ಆಯಾ ಗ್ರಾಮಗಳಿಗೆ ಭೇಟಿ ನೀಡಿದಾಗ ಅಲ್ಲಿನ ಅಂಗನವಾಡಿ, ಶೌಚಾಲಯ ಸೇರಿದಂತೆ ಇತರೆ ಯಾವುದೇ ಸಮಸ್ಯೆಗಳಿದ್ದರೆ ನಮ್ಮ ಗಮನಕ್ಕೆ ತರಬೇಕು. ಅಧಿಕಾರಿಗಳು ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಮಕ್ಕಳಿಗಾಗಿ ಸರಿಯಾಗಿ ಊಟ ಮತ್ತು ಉಪಹಾರ ನೀಡುತ್ತಿದ್ದಾರೆ ಎನ್ನುವ ಕುರಿತು ತಾವು ಹಾಸ್ಟೆಲಗಳಿಗೆ ಭೇಟಿ ನೀಡುತ್ತಿರುವುದಕ್ಕೆ ಅಭಿನಂದನೆಗಳು. ಅಧಿಕಾರಿಗಳು ಟೀಮ್ ಈ ರೀತಿಯಲ್ಲಿ ಕೆಲಸ ಮಾಡಿದಾಗ ಯಾವುದೇ ಸಮಸ್ಯೆಗಳು ಇರುವುದಿಲ್ಲ ಎಂದು ಹೇಳಿದರು.

ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಕೆಲಸ ಮಾಡಿಬೇಕು. ಯಾವುದೇ ಸಮಸ್ಯೆಗಳಾದರೆ ಅವುಗಳನ್ನು ನಮ್ಮ ಗಮನಕ್ಕೆ ತಂದು ಅದರ ಪರಿಹಾರಕ್ಕಾಗಿ ಕ್ರಮ ವಹಿಸಬೇಕು. ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾಮಾಜಿಕ ಅನಿಷ್ಠಾಗಳ ನಿರ್ಮೂಲನೆಗೆ ನಾವೆಲ್ಲರೂ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ ಅವರು ಮಾತನಾಡಿ, ಇಡೀ ರಾಜ್ಯದಲ್ಲಿ ರಾಯಚೂರು ಜಿಲ್ಲೆಯಲ್ಲಿ ಹೆಚ್ಚಿನ ಎಸ್.ಸಿ., ಎಸ್ಟಿ ದೌರ್ಜನ್ಯ ಪ್ರಕರಣಗಳ ಕೇಸಗಳು ಪೊಲೀಸ್ ಠಾಣೆಗಳಲ್ಲಿ ದಾಖಲಾಗಿವೆ. ಇವುಗಳು ನಡೆಯದಂತೆ ಮುಂಜಾಗ್ರತೆವಹಿಸಲು ಜಿಲ್ಲೆಯ ಪ್ರತಿ ಪೊಲೀಸ್ ಠಾಣೆಗಳಲ್ಲಿ ಎಸಿ, ಎಸ್ಟಿ ಸಮುದಾಯದ ನಾಯಕರನ್ನು ಕರೆಸಿ ಸಭೆಗಳನ್ನು ಮಾಡಲಾಗುತ್ತಿದೆ. ಅಧಿಕಾರಿಗಳು ವ್ಯಾಟ್ಸ ಫ್ ಗ್ರುಫ್ ಮಾಡಿ ಎಲ್ಲಿ ಘಟನೆ ನಡೆಯುತ್ತದೆ ಆ ಮಾಹಿತಿ ನಮಗೆ ತಕ್ಷಣ ತಲುಪಿಸಬೇಕು. ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತದ ಸೂಚನೆಗಳನ್ನು ನಮ್ಮ ಪೊಲೀಸ್ ಇಲಾಖೆ ಪಾಲನೆ ಮಾಡುತ್ತದೆ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಕೃಷ್ಣ ಶಾವಂತಗೇರಾ ಅವರು ದೌರ್ಜನ್ಯ ಪ್ರಕರಣಗಳ ತಾಲ್ಲೂಕು ಸಮಿತಿಯ ಕಾರ್ಯ ಚಟುವಟಿಕೆಗಳನ್ನು ಸಭೆಯಲ್ಲಿ ಸವಿವರವಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಲಿಂಗಸುಗೂರು ಸಹಾಯಕ ಆಯುಕ್ತರಾದ ನಾಗೇಂದ್ರ ಬಾಬು ಕುಮಾರ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಟಿ.ರೋಣಿ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷಿ ರಾಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಇದ್ದರು.

ನೈಜ ಮತದಾರರನ್ನೇ ಗುರಿಯಾಗಿಸಿ ಫಾರ್ಮ್-7 ಸಲ್ಲಿಕೆ, ಎಸ್‌ಐಟಿ ತನಿಖೆಗೆ ಆಗ್ರಹ

ಗುರಿಯಾಗಿಸಿ ಫಾರ್ಮ್-7 ಅರ್ಜಿಗಳನ್ನು ಸಲ್ಲಿಸಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಈ ಆರೋಪಕ್ಕೆ ಸಂಬಂಧಿಸಿದಂತೆ ಸ್ವತಂತ್ರವಾಗಿ ದೃಢೀಕರಿಸಲಾದ ದಾಖಲೆಗಳು ಸಾರ್ವಜನಿಕವಾಗಿ ಲಭ್ಯವಿಲ್ಲ. ಅರ್ಜಿಗಳ ಮಾದರಿ, ಅರ್ಜಿದಾರರ ವಿವರ ಹಾಗೂ ಪರಿಶೀಲನಾ ಪ್ರಕ್ರಿಯೆಯನ್ನು ಸಮಗ್ರವಾಗಿ ಪರಿಶೀಲಿಸುವ ಅಗತ್ಯವಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಭಾಗ ಸಂಖ್ಯೆ 13ರ ಬಿಎಲ್‌ಒ ಅಧಿಕಾರಿಯನ್ನು ಸಂಪರ್ಕಿಸಿದಾಗ, ''ಫಾರ್ಮ್-7 ಅರ್ಜಿಯಲ್ಲಿ ಉಲ್ಲೇಖಿಸಿರುವ ಸುಮಾರು 50 ಮಂದಿಯೂ ನೈಜ ಮತದಾರರಾಗಿದ್ದಾರೆ. ಮತದಾರರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಮನೆ-ಮನೆಗೆ ತೆರಳಿ ಪರಿಶೀಲನೆ ನಡೆಸಿ, ಅಗತ್ಯ ಮಾಹಿತಿಯನ್ನು ಪಡೆದುಕೊಂಡು ಅರ್ಜಿಗಳ ಕುರಿತು ಕ್ರಮ ಕೈಗೊಳ್ಳಲಾಗುತ್ತಿದೆ. ನಿಯಮಾನುಸಾರ ಅರ್ಜಿಗಳ ಪರಿಶೀಲನೆ ನಡೆಸಲಾಗುತ್ತಿದ್ದು, ಅರ್ಹ ಮತದಾರರ ಹಕ್ಕಿಗೆ ಧಕ್ಕೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು'' ಎಂದು ಸ್ಪಷ್ಟಪಡಿಸಿದ್ದಾರೆ.

ಮತದಾರರ ವಿರುದ್ಧ ಆಕ್ಷೇಪಣೆ ಸಲ್ಲಿಸಲು ಕಾನೂನುಬದ್ಧ ಅವಕಾಶವಿದ್ದರೂ, ತಪ್ಪು ಮಾಹಿತಿ ಅಥವಾ ಆಧಾರರಹಿತ ಕಾರಣಗಳನ್ನು ನೀಡಿ ಅರ್ಜಿ ಸಲ್ಲಿಸಲಾಗಿದೆಯೇ ಎಂಬುದು ತನಿಖೆಯಿಂದ ಸ್ಪಷ್ಟವಾಗಬೇಕಿದೆ. ಅರ್ಜಿಯಲ್ಲಿ ನಮೂದಿಸಿರುವ ಮೊಬೈಲ್ ಸಂಖ್ಯೆ, ವಿಳಾಸ, ಗುರುತಿನ ವಿವರಗಳು, ದಾಖಲೆಗಳು ಹಾಗೂ ಅರ್ಜಿ ಸಲ್ಲಿಸಿದ ವಿಧಾನವನ್ನು ಪರಿಶೀಲಿಸಿದರೆ ನೈಜ ಅರ್ಜಿದಾರರು ಯಾರು ಎಂಬುದು ಪತ್ತೆಯಾಗಬಹುದು ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಎಸ್‌ಐಟಿ ತನಿಖೆಗೆ ಆಗ್ರಹ

ನೈಜ ಮತದಾರರ ವಿರುದ್ಧ ಆಧಾರರಹಿತವಾಗಿ ಫಾರ್ಮ್-7 ಅರ್ಜಿಗಳನ್ನು ಸಲ್ಲಿಸಿರುವುದು ಸಾಬೀತಾದರೆ, ಅಂತಹ ಅರ್ಜಿಗಳನ್ನು ತಿರಸ್ಕರಿಸುವುದರ ಜೊತೆಗೆ, ತಪ್ಪು ಮಾಹಿತಿ ನೀಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಭಾಗ ಸಂಖ್ಯೆ 13ರಲ್ಲಿ ಸಲ್ಲಿಕೆಯಾಗಿರುವ ಎಲ್ಲ ಫಾರ್ಮ್-7 ಅರ್ಜಿಗಳನ್ನೂ ಸಮಗ್ರವಾಗಿ ಪರಿಶೀಲಿಸಿ, ಅವುಗಳ ಹಿಂದೆ ಸಂಘಟಿತ ಪ್ರಯತ್ನವಿದೆಯೇ, ಅರ್ಜಿದಾರರ ವಿವರಗಳು ನಿಜವೇ, ದಾಖಲೆಗಳನ್ನು ಯಾರು ಒದಗಿಸಿದ್ದಾರೆ ಮತ್ತು ಅರ್ಜಿಗಳನ್ನು ಯಾವ ರೀತಿಯಲ್ಲಿ ಸಲ್ಲಿಸಲಾಗಿದೆ ಎಂಬುದನ್ನು ಪತ್ತೆಹಚ್ಚಲು ಎಸ್‌ಐಟಿ ಅಥವಾ ಸ್ವತಂತ್ರ ತನಿಖಾ ಸಂಸ್ಥೆಯಿಂದ ತನಿಖೆ ನಡೆಸಬೇಕು ಎಂಬ ಬೇಡಿಕೆ ಕೇಳಿಬಂದಿದೆ.

ಮತದಾರರ ಪಟ್ಟಿಯ ಪರಿಷ್ಕರಣೆಯ ಉದ್ದೇಶ ಅರ್ಹ ಮತದಾರರನ್ನು ಕೈಬಿಡುವುದಲ್ಲ; ಪಟ್ಟಿಯನ್ನು ನಿಖರಗೊಳಿಸುವುದಾಗಿದೆ. ಹೀಗಾಗಿ ಪರಿಶೀಲನಾ ಪ್ರಕ್ರಿಯೆಯಲ್ಲಿ ಯಾವುದೇ ನೈಜ ಮತದಾರರ ಹೆಸರು ತಪ್ಪಾಗಿ ಅಳಿಸಲ್ಪಡದಂತೆ ಪಾರದರ್ಶಕತೆ ಮತ್ತು ಎಚ್ಚರಿಕೆ ಅಗತ್ಯ ಎಂಬುದು ಸ್ಥಳೀಯರ ಒತ್ತಾಯವಾಗಿದೆ.

ಉಪಮುಖ್ಯಮಂತ್ರಿ ಪರಮೇಶ್ವರ ಜಿಲ್ಲಾ ಪ್ರವಾಸ

ನಿಲ್ದಾಣಕ್ಕೆ ತೆರಳಿ, ರಾತ್ರಿ 8.25ರ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳಾದ ಡಾ.ಚನ್ನಬಸಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎರಡು ದಿನಗಳ ರಾಷ್ಟ್ರಿಯ ಸಮ್ಮೇಳನ

ಅಧ್ಯಾಪಕರು ಹಾಗೂ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಆನಂದ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ರಾಯಚೂರು ಕುಟುಂಬದ ಆಕ್ರಂದನ

ನಾಯಂಡಹಳ್ಳಿ ಸಮೀಪದ ವಿನಾಯಕ ಲೇಔಟ್‌ನಲ್ಲಿ ಸಿಲಿಂಡರ್ ಸ್ಫೋಟಗೊಂಡು ಜಿಲ್ಲೆಯ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಪತಿ, ಪತ್ನಿ ಮತ್ತು ನಾಲ್ವರು ಮಕ್ಕಳು ಗಂಭೀರವಾಗಿ ಗಾಯಗೊಂಡ ಘಟನೆ ಅಕ್ಟೋಬರ್ 03ರಂದು ನಡೆದಿದೆ.

ಗಾಯಾಳುಗಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದ್ದು, ತುರ್ತು ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಹೊಕ್ರಾಣಿ ಗ್ರಾಮದ ಕರಿಲಿಂಗಪ್ಪ (40), ಪತ್ನಿ ಲಕ್ಷ್ಮಮ್ಮ, ಮಕ್ಕಳಾದ ಚೈತ್ರ, ಬಸವನಗೌಡ, ಗೀತಾ ಮತ್ತು ಗಿರಿಜಾ ಇವರು ಗಾಯಗೊಂಡವರು. ಇವರಲ್ಲಿ ತಾಯಿ ಲಕ್ಷ್ಮಮ್ಮ ಹಾಗೂ ಒಂದು ಮಗುವಿನ ಸ್ಥಿತಿ ಗಂಭೀರವಾಗಿದೆ.

ಕರಿಲಿಗಪ ಕುಟುಂಬದವರು ಉದ್ಯೋಗ ಅರಸಿ ಬೆಂಗಳೂರಿಗೆ ವಲಸೆ ಹೋಗಿದ್ದು, ಭಾರತೀಯ ಕ್ರೀಡಾ ಪ್ರಾಧಿಕಾರ (ಎಸ್‌ಎಐ) ದಲ್ಲಿ ದಿನಗೂಲಿಯಾಗಿ ಗಾರ್ಡನಿಂಗ್ ಕೆಲಸ ನಿರ್ವಹಿಸುತ್ತಿದ್ದ. ಕುಟುಂಬ ಸಮೇತ ಬಾಡಿಗೆ ಮನೆಯಲ್ಲಿ ವಾಸುತ್ತಿದ್ದ. ಕರಿಲಿಂಗಪ್ಪ ವಾಸಿಸುತ್ತಿದ್ದ ಮನೆಯಲ್ಲಿ ಅಡುಗೆ ಸಿಲಿಂಡರ್ ಸ್ಫೋಟಗೊಂಡು ಈ ದುರ್ಘಟನೆ ಜರುಗಿದ್ದು, ಜಿಲ್ಲೆಯ ಜನಪ್ರತಿನಿಧಿಗಳು, ಸಮಾಜ ಸೇವಕರು ಕುಟುಂಬದ ನೆರವಿಗೆ ಧಾವಿಸಿ, ಗುಣಮಟ್ಟದ ಚಿಕಿತ್ಸೆ ದೊರಕಿಸಬೇಕು ಎಂದು ಸಂಬಧಿಕರು ಮನವಿ ಮಾಡಿದ್ದಾರೆ.

ಅ.11ರಂದು ಉಚಿತ ಕ್ಯಾನ್ಸರ್ ತಪಾಸಣೆ; ಸಾರ್ವಜನಿಕರಿಗೆ ಕರೆ

ರಕ್ತಸ್ರಾವ, ಮೆನೋಪಾಸ್ ನಂತರ ರಕ್ತಸ್ರಾವ, ಅಸಹಜ ಅಥವಾ ದುರ್ವಾಸನೆಯ ಯೋನಿ ಸ್ರಾವ ಹಾಗೂ ನಿರಂತರ ಕೆಳಹೊಟ್ಟೆ ನೋವು ಕಂಡುಬಂದಲ್ಲಿ ಗರ್ಭಕಂಠದ ಕ್ಯಾನ್ಸ ರ್ ತಪಾಸಣೆ ಮಾಡಿಸಿಕೊಳ್ಳುವಂತೆ ಅವರು ತಿಳಿಸಿದರು.

ಶಿಬಿರದಲ್ಲಿ ಭಾಗವಹಿಸಲು ನೋಂದಣಿಗಾಗಿ ಹನುಮೇಶ್: 9060332658, ಶಂಷಾದ್: 73496 94980 ಇವರನ್ನು ಸಂಪರ್ಕಿಸಬಹುದು.

ಪತ್ರಿಕಾಗೋಷ್ಠಿಯಲ್ಲಿ ಡಾ. ವೆಂಕಟೇಶ್, ಡಾ. ಕೆ.ಎನ್. ಮಧುಸೂದನ, ಲಯನ್ಸ್ ಕ್ಲಬ್ ಅಧ್ಯಕ್ಷ ಡಾ. ಜಿ. ದೇವರಾಜ, ಡಾ. ವಿ.ವಿ. ಚಿನಿವಾಲರ, ಐಎಂಎ ಖಜಾಂಚಿ ಡಾ. ಅರವಿಂದ ಹಾಗೂ ಕಾರ್ಯದರ್ಶಿ ಡಾ. ನಾಗರಾಜ ಉಪಸ್ಥಿತರಿದ್ದರು.

ಹಾಲು ಲೀಟರ್‌ಗೆ ₹8 ಏರಿಕೆ

ಪೊಲೀಸ್ ಆಯುಕ್ತರು (ಸಂಚಾರ) ಹುದ್ದೆಯನ್ನು 'ಪೊಲೀಸ್ ಆಯುಕ್ತರು (ಸಂಚಾರ)' ಎಂದು ಮರುಪದನಾಮೀಕರಿಸಲಾಗುವುದು. ಈ ಯೋಜನೆಗೆ ಅಗತ್ಯವಿರುವಂತೆ ಒಟ್ಟು 1,022 ಹೊಸ ಹುದ್ದೆಗಳನ್ನು ಸೃಜಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಸಚಿವ ಸಂಪುಟ ಅನುಮೋದಿಸಿದೆ. ಪ್ರಸ್ತಾವಿತ ಘಟಕಗಳಲ್ಲಿ ಅಪರಾಧ ಪ್ರಕರಣಗಳ ನಿರ್ವಹಣೆ, ಸಂಚಾರ ದಟ್ಟಣೆ ನಿಯಂತ್ರಣ ಹಾಗೂ ಸಾರ್ವಜನಿಕ ಭದ್ರತೆಗಾಗಿ ಒಟ್ಟು 6,550 ಹುದ್ದೆಗಳ ಅಗತ್ಯವಿದ್ದು, ಹೊಸ ಹುದ್ದೆಗಳ ಜೊತೆಗೆ ಪ್ರಸ್ತುತ ಚಾಲ್ತಿಯಲ್ಲಿರುವ ಹುದ್ದೆಗಳನ್ನು ಮರು ನಿಯೋಜಿಸಿ ವ್ಯವಸ್ಥೆಯನ್ನು ಬಲಪಡಿಸಲಾಗುವುದು. ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಸಂಚಾರ ನಿರ್ವಹಣೆಗೆ ಅನುಕೂಲವಾಗುವಂತೆ ಕೇಂದ್ರ ಸಂಚಾರ ವಿಭಾಗಕ್ಕೆ 2, ಪಶ್ಚಿಮ ಸಂಚಾರ ವಿಭಾಗಕ್ಕೆ 1, ಉತ್ತರ ಸಂಚಾರ ವಿಭಾಗಕ್ಕೆ 1 ಮತ್ತು ಪಶ್ಚಿಮ ಕಾನೂನು ಸುವ್ಯವಸ್ಥೆ ವಿಭಾಗಕ್ಕೆ 2 ರಂತೆ ಒಟ್ಟು 6 ಹೊಸ ಎಸಿಪಿ () ಹುದ್ದೆಗಳನ್ನು ಸೃಜಿಸಲಾಗುವುದು. ಪ್ರತಿಯೊಂದು ಎಸಿಪಿ ಕಚೇರಿಗೆ ತಲಾ 5 ಕಾರ್ಯಕಾರಿ ಹುದ್ದೆಗಳನ್ನು ಹೊಸದಾಗಿ ನೀಡಲಾಗುವುದು. ಆಡಳಿತಾತ್ಮಕ ವೆಚ್ಚವನ್ನು ಸರಳೀಕರಿಸಲು, ಪ್ರಸ್ತುತ ಇರುವ ಸಿಎಆರ್ () ಘಟಕಗಳಿಂದಲೇ ಹುದ್ದೆಗಳನ್ನು ಮರುನಿಯೋಜಿಸಿ ಪೂರ್ವ ವಿಭಾಗಕ್ಕಾಗಿ ಹೊಸ ಸಿಎಆರ್ ಘಟಕವನ್ನು ರಚಿಸಲಾಗುವುದು ಎಂದೂ ಸಚಿವರು ತಿಳಿಸಿದ್ದಾರೆ.

ಕಲಬುರಗಿ ಭ್ರಷ್ಟಾಚಾರ ಆರೋಪ: ಎಸಿಪಿ ಶರಣಬಸಪ್ಪ ಅಮಾನತಿಗೆ ಆಗ್ರಹ



ಕಲಬುರಗಿ,ಅ.06-

ಪ್ರಕರಣವೊಂದರ ತನಿಖೆ ಪೂರ್ಣಗೊಳಿಸಿ ಬಿರಿಪೋರ್ಟ್ ಸಲ್ಲಿಸುವುದಾಗಿ ಹೇಳಿ ರೂ.40 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟು, ಮುಂಗಡ ಹಣ ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರ ಬಲೆಗೆ ಸಿಕ್ಕಿಬಿದ್ದಿರುವ ಆರೋಪದ ಹಿನ್ನೆಲೆಯಲ್ಲಿ ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯದ ದಕ್ಷಿಣ ಉಪವಿಭಾಗದ ಎಸಿಪಿ ಶರಣಬಸಪ್ಪ ಎಚ್. ಸುಬೇದಾರ್ ಸೇರಿದಂತೆ ಸಂಬಂಧಿತ ಪೊಲೀಸ್ ಸಿಬ್ಬಂದಿ ಯನ್ನು ಕೂಡಲೇ ಸೇವೆಯಿಂದ ಅಮಾನತು ಗೊಳಿಸಬೇಕೆಂದು ಸಾಮಾಜಿಕ ಕಾರ್ಯಕರ್ತ ರಮೇಶ್ ಬಿ. ಚೌಹಾಣ್ ಆಗ್ರಹಿಸಿದ್ದಾರೆ.

ಈ ಕುರಿತು ಡಿಜಿ ಐಜಿಪಿ ಎಂ.ಎ.ಸಲೀಂ, ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್, ಲೋಕಾಯುಕ್ತ ಎಡಿಜಿಪಿ ಮನೀಶ್ ಖರ್ಬಿಕರ್ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಅವರಿಗೆ ಮನವಿ ಸಲ್ಲಿಸಿದ್ದಾರೆ.

ಪ್ರಕರಣದ ಎಫ್‌ಐಆರ್‌ನಲ್ಲಿ ಎಸಿಪಿ ಶರಣಬಸಪ್ಪ ಎಚ್. ಸುಬೇದಾರ್ ಪೊಲೀಸ್ ಬರಹಗಾರ ಚಂದ್ರಕಾಂತ್ ಹಾಗೂ ಕಾನ್ಸ್ಟೆಬಲ್ ರಾಘವೇಂದ್ರ ಸೇರಿದಂತೆ ಪೊಲೀಸ್ ಸಿಬ್ಬಂದಿ, ಪ್ರಕರಣವೊಂದರ ತನಿಖೆಯನ್ನು ಮುಕ್ತಾಯಗೊಳಿಸಿ ಬಿ ರಿಪೋರ್ಟ್ ಸಲ್ಲಿಸುವುದಾಗಿ ಹೇಳಿ ದೂರುದಾರರಿಂದ ರೂ.40 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂಬ ಆರೋಪಗಳಿವೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳು ಕಲಬುರಗಿಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ನಿರೀಕ್ಷಣಾ ಜಾಮೀನು ಕೋರಿ ಕ್ರಿಮಿನಲ್ ವಿವಿಧ ಅರ್ಜಿ ಸಂಖ್ಯೆ 1446/2025 ಸಲ್ಲಿಸಿದ್ದರು. ನ್ಯಾಯಾ ಲಯವು 2025ರ ಸೆಪ್ಟೆಂಬರ್ 8ರಂದು ಅರ್ಜಿಯನ್ನು ವಜಾಗೊಳಿಸಿದೆ. ಪ್ರಕರಣದ ಆರೋಪಿಯಾಗಿರುವ ಖಾಸಗಿ ವ್ಯಕ್ತಿಯೋರ್ವನಿಗೆ ಮಾತ್ರ ಜಾಮೀನು ಕೊಡಲಾಗಿದೆ ಎಂದು ರಮೇಶ್ ಬಿ. ಚೌಹಾಣ್ ತಿಳಿಸಿದ್ದಾರೆ.

''ಗಂಭೀರ ಆರೋಪಗಳಿರುವ ಪ್ರಕರಣದಲ್ಲಿ ಆರೋಪಿಗಳು ಪೊಲೀಸ್ ಇಲಾಖೆಯಲ್ಲಿ ಸೇವೆ ಮುಂದುವರಿಸುವುದು ತನಿಖೆಯ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆ ಇದೆ. ಆದ್ದರಿಂದ ಪ್ರಕರಣದ ಅಂತಿಮ ತೀರ್ಪು ಬರುವವರೆಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನಿಯಮಾನುಸಾರ ಅಮಾನತುಗೊಳಿಸಿ, ನಿಷ್ಪಕ್ಷಪಾತ ತನಿಖೆಗೆ ಅವಕಾಶ ಕಲ್ಪಿಸಬೇಕು'' ಎಂದು ಅವರು ಆಗ್ರಹಿಸಿದ್ದಾರೆ.

ಲೋಕಾಯುಕ್ತ ಠಾಣೆಯ ಅಪರಾಧ ಸಂಖ್ಯೆ 13/2025 ಮತ್ತು ನ್ಯಾಯಾಲಯದ ಕ್ರಿಮಿನಲ್ ವಿವಿಧ ಅರ್ಜಿ ಸಂಖ್ಯೆ 1446/2025ಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪರಿಗಣಿಸಿ, ಆರೋಪ ಎದುರಿಸುತ್ತಿರುವ ಎಸಿಪಿ ಸೇರಿದಂತೆ ಸಂಬಂಧಿತ ಸಿಬ್ಬಂದಿ ವಿರುದ್ಧ ಇಲಾಖಾ ಮಟ್ಟದಲ್ಲಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.



ಬಾಗಲಕೋಟೆ ಜಿಲ್ಲೆಯಲ್ಲಿ ಕೇಂದ್ರ ಬರ ಅಧ್ಯಯನ ತಂಡದಿಂದ ಪರಿಶೀಲನೆ

ಬಾಗಲಕೋಟೆ,ಅ.05-

ಜಿಲ್ಲೆಯ ವಿವಿಧ ತಾಲೂಕುಗಳ ಬರಪೀಡಿತ ಪ್ರದೇಶಗಳಿಗೆ ಕೇಂದ್ರ ಬರ ಅಧ್ಯಯನ ತಂಡವು ಸೋಮವಾರ ಭೇಟಿ ನೀಡಿ ಬೆಳೆ ಹಾನಿ ಹಾಗೂ ರೈತರ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿತು.

ನಿರ್ದೇಶಕ ಡಾ. ಮನ್ ಸಿಂಗ್ ಅವರ ನೇತೃತ್ವದ ಮೂರನೇ ತಂಡದಲ್ಲಿ ಕೇಂದ್ರ ಸರ್ಕಾರದ ಅಧೀನ ಕಾರ್ಯದರ್ಶಿಗಳಾದ ಪಾರ್ಥ ಪಾಲ್ ಹಾಗೂ ರಾಕೇಶ್ ಕುಮಾರ್ ಇದ್ದರು. ತಂಡವು ಬಾಗಲಕೋಟೆ, ಗುಳೇದಗುಡ್ಡ, ಹುನಗುಂದ ಹಾಗೂ ಇಳಕಲ್ ತಾಲೂಕಿನ ವಿವಿಧ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಹಾನಿಯ ಮಾಹಿತಿ ಪಡೆದುಕೊಂಡಿತು.

ಮೊದಲಿಗೆ ಗುಳೇದಗುಡ್ಡ ತಾಲೂಕಿನ ಹಳದೂರು ಗ್ರಾಮಕ್ಕೆ ಭೇಟಿ ನೀಡಿದ ತಂಡವು ಬರದಿಂದ ಹಾನಿಗೊಳಗಾದ ಮೆಕ್ಕೆಜೋಳ ಬೆಳೆ ಪರಿಶೀಲಿಸಿತು. ಬಳಿಕ ಬಾಗಲಕೋಟೆ ತಾಲೂಕಿನ ಶಿರೂರು ಗ್ರಾಮದ ಬಳಿ ಕಬ್ಬು ಬೆಳೆ ಹಾನಿಯಾಗಿರುವ ಕುರಿತು ರೈತರಿಂದ ಮಾಹಿತಿ ಪಡೆದುಕೊಂಡಿತು.

ನಂತರ ಭಗವತಿ ಗ್ರಾಮದ ಬಳಿ ಈರುಳ್ಳಿ ಬೆಳೆ ಹಾನಿಯಾಗಿರುವ ಪ್ರದೇಶಕ್ಕೆ ಭೇಟಿ ನೀಡಿದ ಕೇಂದ್ರ ತಂಡವು ಬೆಳೆಗಳ ಸ್ಥಿತಿಯನ್ನು ಪರಿಶೀಲಿಸಿ, ಹಾನಿಗೊಳಗಾದ ರೈತರೊಂದಿಗೆ ಚರ್ಚಿಸಿ ಮಾಹಿತಿ ಸಂಗ್ರಹಿಸಿತು.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಶಾಸಕ ಉಮೇಶ ಮೇಟಿ ಅವರು ಕೇಂದ್ರ ಅಧ್ಯಯನ ತಂಡದೊಂದಿಗೆ ಉಪಸ್ಥಿತರಿದ್ದು, ಬರದಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಬೆಳೆ ಹಾನಿಯ ಕುರಿತು ತಂಡದ ಗಮನಕ್ಕೆ ತಂದರು.



ಔಷಧಗಳ ಸುರಕ್ಷಿತ ಬಳಕೆಯಲ್ಲಿ ಫಾರ್ಮಸಿಸ್ಟ್‌ಗಳ ಪಾತ್ರ ಮಹತ್ವದ್ದು: ಡಾ.ಶರಣಬಸಪ್ಪ ಕ್ಯಾತನಾಳ

ಕಲಬುರಗಿ,ಅ.06-

ಔಷಧಗಳ ಸುರಕ್ಷಿತ ಬಳಕೆ, ಗುಣಮಟ್ಟದ ಔಷಧ ವಿತರಣೆ ಹಾಗೂ ಸಾರ್ವಜನಿಕ ಆರೋಗ್ಯ ಸೇವೆಯಲ್ಲಿ ಫಾರ್ಮಸಿಸ್ಟ್‌ಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಬದಲಾಗುತ್ತಿರುವ ಆರೋಗ್ಯ ಕ್ಷೇತ್ರದ ಅಗತ್ಯಗಳಿಗೆ ಅನುಗುಣವಾಗಿ ಫಾರ್ಮಸಿ ಅಧಿಕಾರಿಗಳ ಜ್ಞಾನ ಹಾಗೂ ಕೌಶಲ್ಯಗಳನ್ನು ನಿರಂತರವಾಗಿ ಬಲಪಡಿಸುವ ಅಗತ್ಯವಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ಕಲಬುರಗಿ ಜಿಲ್ಲಾ ಶಾಖೆ ವತಿಯಿಂದ ನಗರದ ಟ್ಯಾಂಕ್ ಬಂಡ್ ರಸ್ತೆಯ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ರವಿವಾರ ಆಯೋಜಿಸಿದ್ದ ವಿಶ್ವ ಫಾರ್ಮಸಿಸ್ಟ್ ದಿನಾಚರಣೆ-2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯದ ಭವಿಷ್ಯಕ್ಕಾಗಿ ಫಾರ್ಮಸಿ ಅಧಿಕಾರಿಗಳ ಸಬಲೀಕರಣ ಎಂಬ ಘೋಷವಾಕ್ಯದೊಂದಿಗೆ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆರೋಗ್ಯ ಸೇವೆಯ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಫಾರ್ಮಸಿಸ್ಟ್‌ಗಳು ಪ್ರಮುಖ ಪಾತ್ರ ವಹಿಸುತ್ತಾರೆ. ರೋಗಿಗಳಿಗೆ ಸೂಕ್ತ ಔಷಧಗಳ ಕುರಿತು ಮಾಹಿತಿ ನೀಡುವುದು, ಔಷಧಗಳ ಸುರಕ್ಷಿತ ಬಳಕೆಯನ್ನು ಖಚಿತಪಡಿಸುವುದು ಹಾಗೂ ಗುಣಮಟ್ಟದ ಔಷಧ ವಿತರಣೆಯಲ್ಲಿ ಅವರು ವಹಿಸುವ ಜವಾಬ್ದಾರಿ ಮಹತ್ವದ್ದಾಗಿದೆ ಎಂದರು. ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಹಾಗೂ ಜಿಮ್ಸ್ ಆಸ್ಪತ್ರೆಯ ಅಧೀಕ್ಷಕ ಡಾ. ಶಿವಕುಮಾರ ಸಿ.ಆರ್., ಜಿಲ್ಲಾ ಶಸ್ತ್ರಚಿಕಿತ್ಸ ಕಿ ಡಾ. ರುಕಿಯಾ ಅಸ್ನಾ ರಾಬಾ, ಸಹಾಯಕ ಔಷಧ ನಿಯಂತ್ರಕ-2 ತೇಜಸ್ವಿ ಹಾಗೂ ಅಖಿಲ ಭಾರತ ಸರ್ಕಾರಿ, ಖಾಸಗಿ ಹಾಗೂ ಸಾರ್ವಜನಿಕ ವಲಯದ ಫಾರ್ಮಸಿ ಅಧಿಕಾರಿಗಳ ಸಂಘದ ರಾಷ್ಟ್ರೀಯ ಅಧ್ಯಕ್ಷ ಡಾ. ಬಿ.ಎಸ್. ದೇಸಾಯಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಜಿಮ್ಸ್ ಆಸ್ಪತ್ರೆಯ ಅಸಿಸ್ಟಂಟ್ ಡೈರೆಕ್ಟರ್ ಆಫ್ ಫಾರ್ಮಸಿ ನರಸಿಂಹರಾಜ, ಚಿಮ್ಸ್ ಆಸ್ಪತ್ರೆಯ ಡೆಪ್ಯೂಟಿ ಚೀಫ್ ಫಾರ್ಮಸಿ ಆಫೀಸರ್ ಸಾವನಕುಮಾರ, ರಾಜ್ಯ ಪರಿಷತ್ ಸದಸ್ಯ ಬಸವರಾಜ ಸಜ್ಜನ, ಪ್ರಧಾನ ಕಾರ್ಯದರ್ಶಿ ರೇವಣಸಿದ್ದೇಶ್ವರ ಹಿರೇಮಠ, ಕೋಶಾಧ್ಯಕ್ಷ ಮಂಜುನಾಥ ರಾಠೋಡ ಹಾಗೂ ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಕಾಂಗ್ರೆಸ್ ಸರ್ಕಾರದ ಕೊಡುಗೆ ಶೂನ್ಯ: ರಘು ಕೌಟಿಲ್ಯ



ಕಲಬುರಗಿ,ಅ.06-

ರಾಜ್ಯದ ಕಾಂಗ್ರೆಸ್ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಯಾವುದೇ ಮಹತ್ವದ ಕಾರ್ಯಕ್ರಮಗಳನ್ನು ರೂಪಿಸಿಲ್ಲ. ಇದರಿಂದ ಹಿಂದುಳಿದ ಸಮುದಾಯಗಳು ಆರ್ಥಿಕ ಹಾಗೂ ಸಾಮಾಜಿಕವಾಗಿ ಮತ್ತಷ್ಟು ಹಿಂದುಳಿಯುವಂತಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಬಿಜೆಪಿ ಒಬಿಸಿ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ಆರೋಪಿಸಿದರು.

ನಗರದ ಕೆಕೆಸಿಸಿಐ ಸಭಾಂಗಣದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಬುರಗಿ ಭಾಗದಲ್ಲಿ ಹಿಂದುಳಿದ ವರ್ಗಗಳ ಸಂಘಟನೆ ಹಾಗೂ ಬಲವರ್ಧನೆಗಾಗಿ ಪ್ರವಾಸ ಕೈಗೊಳ್ಳಲಾಗುತ್ತಿದೆ. ಕಾಯಕ ಸಮುದಾಯಗಳನ್ನು ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ದೇವರಾಜ ಅರಸು ನಿಗಮಕ್ಕೆ 129 ಕೋಟಿ ರೂ., ಲಿಂಗಾಯತ ಹಾಗೂ ಒಕ್ಕಲಿಗ ನಿಗಮಗಳಿಗೆ ತಲಾ 82 ಕೋಟಿ ರೂ., ಮರಾಠ ನಿಗಮಕ್ಕೆ 68 ಕೋಟಿ ರೂ., ವಿಶ್ವಕರ್ಮ ನಿಗಮಕ್ಕೆ 17 ಕೋಟಿ ರೂ., ಅಲೆಮಾರಿ ನಿಗಮಕ್ಕೆ 16 ಕೋಟಿ ರೂ., ಉಪ್ಪಾರ ನಿಗಮಕ್ಕೆ 11 ಕೋಟಿ ರೂ., ಸವಿತಾ ಸಮಾಜಕ್ಕೆ 7 ಕೋಟಿ ರೂ., ಅಂಬಿಗರ ನಿಗಮಕ್ಕೆ 6.50 ಕೋಟಿ ರೂ. ಹಾಗೂ ತಿಗಳ, ಕುಂಬಾರ, ಗಣಿಗ ಮತ್ತು ಕೊಡವ ನಿಗಮಗಳಿಗೆ ತಲಾ 2 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದೆ. ಆದರೆ ಹಡಪದ ಸಮುದಾಯಕ್ಕೆ ಅನುದಾನ ನೀಡಿಲ್ಲ ಎಂದು ಅವರು ಆರೋಪಿಸಿದರು. ಸಾಮಾಜಿಕ ನ್ಯಾಯ ಹಾಗೂ ರಾಜಕೀಯ ಪ್ರಾತಿನಿಧ್ಯಕ್ಕಾಗಿ ಬಿಜೆಪಿ ನಿರಂತರವಾಗಿ ಶ್ರಮಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತ ಪರಿಕಲ್ಪನೆಯಡಿ 12ನೇ ಶತಮಾನದ ಕಾಯಕ ಶರಣರ ಶ್ರಮ ಸಂಸ್ಕೃತಿಗೆ ಉತ್ತೇಜನ ನೀಡಲಾಗುತ್ತಿದೆ. ಶ್ರಮಿಕ ವರ್ಗದ ಕೊಡುಗೆಯ ಮೂಲಕ ವಿಕಸಿತ ಭಾರತ ನಿರ್ಮಿಸುವ ಗುರಿಯನ್ನು ಹೊಂದಲಾಗಿದೆ ಎಂದು ಹೇಳಿದರು.

ಹಲವು ನಿಗಮಗಳಿಗೆ ಅನುದಾನ ಘೋಷಿಸಿದರೂ, ಅದನ್ನು ಸಮರ್ಪಕವಾಗಿ ಕಾರ್ಯಗತಗೊಳಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ರಘು ಕೌಟಿಲ್ಯ, ರೈತರು, ಕೃಷಿ ಕಾರ್ಮಿಕರು, ನೇಕಾರರು, ಕುಂಬಾರರು, ಕಂಬಾರರು ಸೇರಿದಂತೆ ವಿವಿಧ ಕಾಯಕ ಸಮುದಾಯಗಳ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಸದಸ್ಯ ಡಾ. ಬಿ.ಜಿ. ಪಾಟೀಲ್, ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಚಂದು ಪಾಟೀಲ್ ಹಾಗೂ ಅಶೋಕ್ ಬಗಲಿ, ಬಿಜೆಪಿ ಒಬಿಸಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇರಿ, ರಾಜ್ಯ ಕಾರ್ಯದರ್ಶಿಗಳಾದ ವೆಂಕಟೇಶ್ ಉಪ್ಪಾರ ಹಾಗೂ ಈರಣ್ಣ ಹಡಪದ, ಒಬಿಸಿ ಮೋರ್ಚಾ ಅಧ್ಯಕ್ಷ ದೇವೀಂದ್ರ ದೇಸಾಯಿ ಕಲ್ಲೂರು, ಶರಣಪ್ಪ ತಳವಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ : ಎನ್ ಡಿಎ ಅಭ್ಯರ್ಥಿಯಾಗಿ ಶಶೀಲ್ ನಮೋಶಿ ನಾಮಪತ್ರ ಸಲ್ಲಿಕೆ



ಕಲಬುರಗಿ,ಅ.06-

ವಿಧಾನ ಪರಿಷತ್?ನ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆಗೆ ಬಿಜೆಪಿಜೆಡಿಎಸ್ ಒಕ್ಕೂಟದ (ಎನ್? ಡಿಎ) ಅಭ್ಯರ್ಥಿಯಾಗಿ ಶಶೀಲ್ ನಮೋಶಿ ಅವರು ಸೋಮವಾರ ನಾಮಪತ್ರ ಸಲ್ಲಿಸಿದರು.

ನಗರದ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಚುನಾವಣಾಧಿಕಾರಿಯೂ ಆಗಿರುವ ಪ್ರಾದೇಶಿಕ ಆಯುಕ್ತೆ ಝುಹೀರಾ ನಸೀಮ್ ಅವರಿಗೆ ಶಶೀಲ್ ನಮೋಶಿ ಅವರು ತಮ್ಮ ನಾಮಪತ್ರವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪುರ್, ಮಾಜಿ ಸಂಸದ ಉಮೇಶ್ ಜಾಧವ್ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಈಶಾನ್ಯ ಶಿಕ್ಷಕರ ಮತಕ್ಷೇತ್ರದಲ್ಲಿ ಒಕ್ಕೂಟದ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಶಶೀಲ್ ನಮೋಶಿ ಅವರ ನಾಮಪತ್ರ ಸಲ್ಲಿಕೆ ವೇಳೆ ಪಕ್ಷದ ಮುಖಂಡರು ಹಾಗೂ ಬೆಂಬಲಿಗರು ಉಪಸ್ಥಿತರಿದ್ದು, ಅಭ್ಯರ್ಥಿಗೆ ಶುಭ ಹಾರೈಸಿದರು.



ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಕಾಂಗ್ರೆಸ್ ಅಭ್ಯರ್ಥಿಯಾಗಿ ಶರಣಪ್ಪ ಮಟ್ಟೂರ ನಾಮಪತ್ರ ಸಲ್ಲಿಕೆ

ಕಲಬುರಗಿ,ಅ.06-

ವಿಧಾನ ಪರಿಷತ್?ನ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಶರಣಪ್ಪ ಮಟ್ಟೂರ ಅವರು ಸೋಮವಾರ ನಾಮಪತ್ರ ಸಲ್ಲಿಸಿದರು.

ನಗರದ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಚುನಾವಣಾಧಿಕಾರಿಯೂ ಆಗಿರುವ ಪ್ರಾದೇಶಿಕ ಆಯುಕ್ತೆ ಝುಹೀರಾ ನಸೀಮ್ ಅವರಿಗೆ ಶರಣಪ್ಪ ಮಟ್ಟೂರ ಅವರು ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಶಾಸಕರಾದ ಅಲ್ಲಮಪ್ರಭು ಪಾಟೀಲ್ ಹಾಗೂ ಖನೀಜ್ ಫಾತಿಮಾ ಸೇರಿದಂತೆ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಈಶಾನ್ಯ ಶಿಕ್ಷಕರ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಶರಣಪ್ಪ ಮಟ್ಟೂರ ಅವರ ನಾಮಪತ್ರ ಸಲ್ಲಿಕೆ ವೇಳೆ ಪಕ್ಷದ ಮುಖಂಡರು ಹಾಗೂ ಬೆಂಬಲಿಗರು ಉಪಸ್ಥಿತರಿದ್ದು, ಅಭ್ಯರ್ಥಿಗೆ ಶುಭ ಹಾರೈಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಎದ್ದು ನಿಂತ ಯುವಜನತೆ, ಹೊಸ ಬೆಳವಣಿಗೆಯತ್ತ ಭಾರತ

ಪ್ರಜಾಪ್ರಭುತ್ವವೆಂದರೆ ಕೇವಲ ಚುನಾವಣೆ, ಸರ್ಕಾರ ರಚನೆ, ಆಡಳಿತ ನಡೆಸುವುದಷ್ಟೇ ಅಲ್ಲ, ದನಿ ಇಲ್ಲದವರಿಗೆ ದನಿಯಾಗುವ, ವ್ಯಕ್ತಿ ಸ್ವಾತಂತ್ರ್ಯಕ್ಕೆ ಬೆಲೆ ತರುವ, ಪ್ರಶ್ನಿಸುವ ಹಕ್ಕನ್ನು ರಕ್ಷಿಸುವ ವ್ಯವಸ್ಥೆ. ಪ್ರಜಾಪ್ರಭುತ್ವದ ಮೂಲ ಮಂತ್ರವಾದ ಮತದಾರನ ಮತದಾನದ ಹಕ್ಕನ್ನು ಉಳಿಸುವ ನಿಟ್ಟಿನಲ್ಲಿ ಈಗ ದೇಶದ ಯುವಸಮೂಹ ಮಾತನಾಡುತ್ತಿದೆ. ಹೊಸ ಬೆಳವಣಿಗೆಯತ್ತ ಭಾರತ ಹೊರಳುತ್ತಿದೆ...

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಬಗ್ಗೆ ಸಿಡಿದೆದ್ದ ವಿದ್ಯಾರ್ಥಿ ಸಮೂಹ ಮೊದಲ ಬಾರಿಗೆ ಬೀದಿಗಿಳಿಯಿತು. ದೆಹಲಿಯ ಜಂತರ್ ಮಂತರ್‌ನಲ್ಲಿ ಕಲೆತು ಕೇಂದ್ರ ಸರ್ಕಾರದ ಶಿಕ್ಷಣ ನೀತಿ ಮತ್ತು ಪರೀಕ್ಷಾ ವ್ಯವಸ್ಥೆಗಳ ವಿರುದ್ಧ ಆಕ್ರೋಶ ಹೊರಹಾಕಿತು. ಅದರ ಫಲವಾಗಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡುವಂತಾಯಿತು.

ಆದರೆ ವಿದ್ಯಾರ್ಥಿಗಳ ಪ್ರತಿಭಟನೆಯನ್ನು ಹತ್ತಿಕ್ಕಲು ಮೋದಿ ಸರ್ಕಾರ ಅಮಾನವೀಯ ಕ್ರೌರ್ಯಕ್ಕಿಳಿಯಿತು. ವಿದ್ಯಾರ್ಥಿಗಳು ನಮ್ಮ ಮಕ್ಕಳು ಎನ್ನದೆ ಮೋಳೆ ಲಾಠಿ ಬೀಸಿತು, ಪೆಲೆಟ್ ಗನ್ ಪ್ರಯೋಗಿಸಿತು, ಕೇಸು ದಾಖಲಿಸಿ ಕಿರುಕುಳ ನೀಡಿತು, ಬಾಲಕಿಯಿಂದ ಕ್ಷಮೆ ಕೇಳಿಸಿತು. ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆಗೆ ಸಿಗುವ ಬಹುಮಾನವೇ ಇದು ಎಂದು ವಿರೋಧ ಪಕ್ಷಗಳ ನಾಯಕರು ಮತ್ತು ದೇಶದ ಪ್ರಜೆಗಳು ಪ್ರಶ್ನಿಸಿದಾಗ, ಪ್ರಭುತ್ವ ಮೌನಕ್ಕೆ ಜಾರಿತು.

ಮೌನಕ್ಕೆ ಜಾರದ ಯುವಸಮೂಹ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹೋರಾಟದ ನಂತರ, ದೇಶದ ಸರ್ಕಾರಿ ಶಾಲೆಗಳತ್ತ ಗಮನ ಹರಿಸಿತು. ಸ್ಕೂಲ್ ಟೀಕ್ ಕರೋ ಎಂಬ ಆಂದೋಲನ ಹಮ್ಮಿಕೊಂಡಿತು. ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರು, ಸುಸಜ್ಜಿತ ಶೌಚಾಲಯ, ಕಟ್ಟಡಗಳ ದುರಸ್ತಿ, ಶಿಕ್ಷಕರ ಕೊರತೆ ಕುರಿತು ಮಾತನಾಡತೊಡಗಿತು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಿಕ್ಷಣವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು ಮತ್ತು ಅವಶ್ಯಕತೆಯಾಗಿದೆ. ಪ್ರಜಾಪ್ರಭುತ್ವದ ಯಶಸ್ಸು ಮತ್ತು ಪ್ರಗತಿಯು ಆ ದೇಶದ ನಾಗರಿಕರ ಜ್ಞಾನ ಮತ್ತು ಜಾಗೃತಿಯನ್ನು ಅವಲಂಬಿಸಿರುತ್ತದೆ. ಇದನ್ನು ವಿದ್ಯಾರ್ಥಿ ಯುವಸಮೂಹ ಪ್ರಭುತ್ವದ ಗಮನಕ್ಕೆ ತರಲು ಪ್ರಯತ್ನಿಸಿದಾಗ, ಮೋದಿಯವರು ಮೌನಕ್ಕೆ ಜಾರಿದರು.

ಏತನ್ಮಧ್ಯೆ, ಕೇಂದ್ರ ಚುನಾವಣಾ ಆಯೋಗ ಎಸ್‌ಐಆರ್ ನೆಪದಲ್ಲಿ ದೇಶದ ಮತದಾರರ ಮತದಾನದ ಹಕ್ಕನ್ನೇ ಇಲ್ಲವಾಗಿಸುವ ಕೃತ್ಯಕ್ಕೆ ಕೈಹಾಕಿತು. ಅಧಿಕಾರಸ್ಥರ ಕೈಗೊಂಬೆಯಾದ ಮುಖ್ಯ ಚುನಾವಣಾ ಆಯುಕ್ತರು, ಅವರಿಗೆ ಅನುಕೂಲಕರ ವಾತಾವರಣ ಸೃಷ್ಟಿಸಲು ಚುನಾವಣಾ ಆಯೋಗದ ಘನತೆಗೆ ಧಕ್ಕೆ ತರುವಂತಹ ಕೆಲಸದಲ್ಲಿ ನಿರತರಾದರು.

ಈ ಕುರಿತು ದೇಶದ ವಿಚಾರವಂತರು, ಚಿಂತಕರು, ತಜ್ಞರು, ನಿವೃತ್ತ ನ್ಯಾಯಮೂರ್ತಿಗಳು- ಸಾಂವಿಧಾನಿಕ ಸಂಸ್ಥೆಗಳು ಮತ್ತು ಸಂವಿಧಾನದ ಮಹತ್ವ ಕುರಿತು ಸಾರ್ವಜನಿಕವಾಗಿ ಮಾತನಾಡತೊಡಗಿದರು. ಅದರಲ್ಲೂ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಉಜ್ವಲ್ ಭುಯಾನ್ ಅವರು, ಲಕ್ಷಾಂತರ ಜನರನ್ನು ಮತದಾನದ ಹಕ್ಕಿನಿಂದ ವಂಚಿಸುವ ಯಾವುದೇ ಪ್ರಕ್ರಿಯೆ ಅವರನ್ನು ಎರಡನೇ ದರ್ಜೆಯ ನಾಗರಿಕರನ್ನಾಗಿ ಮಾಡಬಹುದು. ಅಂತಹ ಪ್ರಕ್ರಿಯೆ ನಿರಂಕುಶವಾಗುತ್ತದೆ ಎನ್ನುವ ಎಚ್ಚರಿಕೆಯ ಮಾತುಗಳನ್ನಾಡಿದರು. ಪ್ರಜಾಪ್ರಭುತ್ವದ ಮೂಲ ತತ್ವವನ್ನು ನೆನಪಿಸಿದರು.

ಇದಕ್ಕೆ ಪೂರಕವಾಗಿ ನ್ಯಾಯಾಂಗದ ಕೆಲವು ಸೂಚನೆಗಳು ಮೂಲಭೂತ ಪ್ರಶ್ನೆಗಳನ್ನು ನಮ್ಮ ಮುಂದಿಡತೊಡಗಿದವು. ಸಂವಿಧಾನವನ್ನು ರಕ್ಷಿಸುವ ಹೊಣೆ ನ್ಯಾಯಾಲಯಗಳ ಮೇಲಿದೆ ಎಂದು ನ್ಯಾಯಮೂರ್ತಿಗಳು ನೆನಪಿಸಿದ್ದು, ಸಂವಿಧಾನದ ಹಕ್ಕುಗಳಿಗಾಗಿ ವಿದ್ಯಾರ್ಥಿಗಳು, ಯುವಜನರು ಬೀದಿಗಿಳಿಯುವಂತೆ ಪ್ರೇರೇಪಿಸಿತು. ಮತ್ತೆ ದೆಹಲಿಯ ಜಂತರ್ ಮಂತರ್‌ನಲ್ಲಿ ಯುವಸಮೂಹ ಜಮಾವಣೆಗೊಂಡಿತು.

ಪ್ರಜಾಪ್ರಭುತ್ವವೆಂದರೆ ಕೇವಲ ಚುನಾವಣೆ, ಸರ್ಕಾರ ರಚನೆ, ಆಡಳಿತ ನಡೆಸುವುದಷ್ಟೇ ಅಲ್ಲ, ದನಿ ಇಲ್ಲದವರಿಗೆ ದನಿಯಾಗುವ, ವ್ಯಕ್ತಿ ಸ್ವಾತಂತ್ರ್ಯಕ್ಕೆ ಬೆಲೆ ತರುವ, ಪ್ರಶ್ನಿಸುವ ಹಕ್ಕನ್ನು ರಕ್ಷಿಸುವ ವ್ಯವಸ್ಥೆ. ಪ್ರಜಾಪ್ರಭುತ್ವದ ಮೂಲ ಮಂತ್ರವಾದ ಮತದಾರನ ಮತದಾನದ ಹಕ್ಕನ್ನು ಉಳಿಸುವ ನಿಟ್ಟಿನಲ್ಲಿ ಈಗ ದೇಶದ ಯುವಸಮೂಹ ಮಾತನಾಡುತ್ತಿದೆ. ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆ ಕೇಳುತ್ತಿದೆ. ಗ್ಯಾನೇಶ್‌ರನ್ನು ಕೈಗೊಂಬೆಯನ್ನಾಗಿ ಮಾಡಿಕೊಂಡವರ ಕಿಡಿಗೇಡಿತನವನ್ನು ಬಯಲು ಮಾಡುತ್ತಿದೆ. ಇದು ಮೋದಿ ಮತ್ತು ಸಹಚರರಿಗೆ ಸಹಿಸಲಸಾಧ್ಯ ಸಂಕಟ ತಂದಿದೆ.

ಸಂಕಟ ಏಕೆ ಎಂದರೆ, 2024ರ ಲೋಕಸಭಾ ಚುನಾವಣೆಯಲ್ಲಿ ಮೋದಿಯವರ ಮಹತ್ವಾಕಾಂಕ್ಷೆಯ ಚಾರ್ ಸೌ ಪಾರ್ ಕೈಕೊಟ್ಟಿತ್ತು, ಬಹುಮತಕ್ಕಾಗಿ ಬೇರೆ ಪಕ್ಷಗಳನ್ನು ಅಂಗಲಾಚುವಂತಾಗಿತ್ತು. ಕೊನೆಗೆ ನಿತಿಶ್ ಮತ್ತು ನಾಯ್ಡು ಬೆಂಬಲದಿಂದ ಮೂರನೆಯ ಬಾರಿಗೆ ಪ್ರಧಾನಿಯಾಗುವಂತಾಗಿತ್ತು.

ಪ್ರಧಾನಿಯಾದ ನಂತರ ಮೋದಿಯವರ ವರಸೆ ಬದಲಾಯಿತು. ಕೂತ ಕುರ್ಚಿಯನ್ನು ಇನ್ನಷ್ಟು ಗಟ್ಟಿಗೊಳಿಸಿಕೊಳ್ಳುವ ನಿಟ್ಟಿನಲ್ಲಿ ಹಲವು ಅಡ್ಡಾಡಿ ಕ್ರಮಗಳಿಗೆ ಕೈಹಾಕಿದರು. ಮೊದಲ ಎರಡು ಅವಧಿಯಲ್ಲಿ ಸಿಬಿಐ, ಇಡಿ, ಐಟಿ, ಎನ್‌ಐಎಗಳಂತಹ ಸಾಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡರೆ, ಈ ಬಾರಿ ಚುನಾವಣಾ ಆಯೋಗವನ್ನು ತಮ್ಮನುಕೂಲಕ್ಕೆ ತಕ್ಕಂತೆ ತಿರುಗಿಸಿಕೊಂಡರು. ತಿರುಗಿಸಿಕೊಳ್ಳಲು ಗ್ಯಾನೇಶ್ ಕುಮಾರ್‌ನಂತಹ ಕೈಗೊಂಬೆಯನ್ನು ನೇಮಕ ಮಾಡಿಕೊಂಡರು. ಅದರ ಫಲವಾಗಿ ಸಾಂವಿಧಾನಿಕ ಸಂಸ್ಥೆ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ ಬದಲು ರಾಜಕೀಯ ಉದ್ದೇಶಕ್ಕಾಗಿ ಬಳಕೆಯಾಯಿತು. ದೇಶದ ಜನರ ನಂಬಿಕೆಗೆ ದ್ರೋಹ ಬಗೆಯಿತು. ಪ್ರಜಾಪ್ರಭುತ್ವದ ಮೂಲ ಆಶಯವನ್ನು ಮಣ್ಣುಗೂಡಿಸಿತು.

ಕಳೆದ ಹನ್ನೆರಡು ವರ್ಷಗಳಿಂದ ಪ್ರಧಾನಿ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ ಇದನ್ನೇ ಆಡಳಿತ ಎನ್ನುತ್ತಿದೆ. ಮೋದಿಯವರ ಆಡಳಿತ ಸರ್ವಾಧಿಕಾರಿಯಾಗುವತ್ತ ಗಮನ ಹರಿಸುತ್ತಿದೆ. ಸಾಂವಿಧಾನಿಕ ಸಂಸ್ಥೆಗಳು ಸಡಿಲಗೊಂಡು, ಪ್ರಜಾಸತ್ತೆಯ ಕಂಬಗಳು ದುರ್ಬಲಗೊಳ್ಳತೊಡಗಿವೆ.

ಇಂತಹ ಸಂದರ್ಭದಲ್ಲಿ ದೇಶದ ಯುವಸಮೂಹ ಎದ್ದು ನಿಂತಿದೆ. ಬೀದಿಗಿಳಿದು ಪ್ರತಿಭಟನೆಯ ಮೂಲಕ ಎಚ್ಚರಿಕೆಯ ಸಂದೇಶವನ್ನು ಸರಕಾರಕ್ಕೆ ರವಾನಿಸುತ್ತಿದೆ. ಜೆನ್ ಝಿ ಎಂದು ಕರೆಯಲ್ಪಡುವ ಈ ಸಮೂಹದ ಯುವಕ-ಯುವತಿಯರಿಗೆ ಯಾವುದೇ ಪಕ್ಷಗಳ ಕಟ್ಟುಪಾಡುಗಳಿಲ್ಲ. ಯಾವ ಚೌಕಟ್ಟಿಗೂ ಇವರು ಒಳಪಟ್ಟವರಲ್ಲ. ಇವರ ಪ್ರತಿಭಟನೆಯ ಮಾರ್ಗವೂ ಹೊಸತು, ವಿಧಾನವೂ ವಿಭಿನ್ನ. ಆದರೆ, ಇವೆಲ್ಲವೂ ಗಾಂಧಿ ಹಾಕಿಕೊಟ್ಟ ಅಹಿಂಸಾ ಮಾರ್ಗದಲ್ಲಿಯೇ ಮುಂದುವರೆದಿರುವುದು ಇಲ್ಲಿಯ ವಿಶೇಷ.

ಆದರೆ ಬಿಜೆಪಿ, ಸವೆದ ಸನಾತನ ಸಂಸ್ಕೃತಿ, ರಾಷ್ಟ್ರೀಯತೆ, ದೇಶಪ್ರೇಮ, ಹಿಂದೂ-ಮುಸ್ಲಿಂ ದ್ವೇಷದಲ್ಲಿಯೇ ಬಿದ್ದು ಒದ್ದಾಡುತ್ತಿದೆ. ಇದರಿಂದ ನವಭಾರತದ ಯುವ ಸಮೂಹ ದೂರ ಸರಿದು ತುಂಬಾ ದಿನಗಳಾಗಿವೆ. ಇದು ಪ್ರಧಾನಿ ಮೋದಿ ಮತ್ತು ಅಮಿತ್ ಶಾ ಅವರಿಗೆ ತೊಡೆ ನಡುಕ ಹುಟ್ಟಿಸಿದೆ. ಹೊಸ ದಾರಿ ಹುಡುಕುವಂತೆ ಮಾಡಿದೆ. ಇಬ್ಬರಿಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾರ್ಗ ಸರಿ ಎನಿಸಿದೆ, ಅನುಕರಿಸಲು ಹವಣಿಸುತ್ತಿರುವುದು ಅವರ ನಡೆ-ನುಡಿಯಲ್ಲಿ ಕಾಣುತ್ತಿದೆ. ಮೊದಲು ಮೌನವನ್ನು ಮಂತ್ರವನ್ನಾಗಿ ಮಾಡಿಕೊಂಡಿದ್ದ ಈ ನಾಯಕರಿಗೆ, ಈಗ ಮೌನವೇ ಮರಣಶಾಸನ ಬರೆಯುತ್ತಿದೆ.

2014ರಿಂದ ಇಲ್ಲಿಯವರೆಗಿನ ಮೋದಿಯವರ ಆಡಳಿತಾವಧಿಯಲ್ಲಿ ಮೊದಲ ಮುಖಭಂಗ ರೈತರ ಪ್ರತಿಭಟನೆಯಾದರೆ, ಈಗ ಯುವಸಮೂಹದ ಪ್ರತಿಭಟನೆ ಜಂಘಾಬಲವನ್ನೇ ಉಡುಗಿಸಿಬಿಟ್ಟಿದೆ. ಈ ಹೊಸ ಬೆಳವಣಿಗೆ ಹೊಸ ಭಾರತ ಕಟ್ಟುವತ್ತ ಸಾಗಲಿ. ದೇಶದ ಭವಿಷ್ಯಕ್ಕಾಗಿ ಯುವಸಮೂಹದೊಂದಿಗೆ ಎಲ್ಲರೂ ಕೈಜೋಡಿಸುವಂತಾಗಲಿ.

ಡಾ. ಟಿ.ಎಸ್. ಚನ್ನೇಶ್ ಸರಣಿ ವೈದ್ಯಕೀಯ ನೊಬೆಲ್ ಪ್ರಶಸ್ತಿ ಪಡೆದ ಸಂಶೋಧನೆಯ ಸುತ್ತ ಒಂದು ನೋಟ

ನಮ್ಮ ಮೆದುಳು, ಭಾವನೆಗಳನ್ನು, ವರ್ತನೆಗಳನ್ನು ಮತ್ತು ದೈಹಿಕ ಕಾರ್ಯಗಳನ್ನು ಹೇಗೆ ನಿಯಂತ್ರಿಸುತ್ತದೆ ಎಂಬುದನ್ನು ಸಂಶೋಧನೆಯಿಂದ ಬಿಡಿಸಿಟ್ಟು 2026ರ ವೈದ್ಯಕೀಯ ನೊಬೆಲ್ ಪ್ರಶಸ್ತಿಗೆ ಪಾತ್ರರಾದ ಮೂವರು ಸಂಶೋಧಕರು ಮತ್ತು ಸಂಶೋಧನೆಯ ಸುತ್ತಲಿನ ವಿಶ್ಲೇಷಣಾತ್ಮಕ ಬರಹ

ಈ ವರ್ಷ 2026ರ ಶರೀರವಿಜ್ಞಾನ ಅಥವಾ ವೈದ್ಯಕೀಯ ವಿಭಾಗದ ನೊಬೆಲ್ ಪ್ರಶಸ್ತಿಯನ್ನು ಆಪ್ಟೊಜೆನೆಟಿಕ್ಸ್ () ಎಂಬ ನರವಿಜ್ಞಾನದ ಕ್ಷೇತ್ರಕ್ಕಾಗಿ ನೀಡಲಾಗಿದೆ. ಪ್ರಸ್ತುತ ಶೋಧವು ಸುಮಾರು 1.3ರಿಂದ 1.4 ಕಿ.ಗ್ರಾಂ ತೂಕದ ನಮ್ಮ ಮೆದುಳಿನ ನರಕೋಶಗಳು ನೆನಪುಗಳನ್ನು, ಭಾವನೆಗಳನ್ನು ಮತ್ತು ವರ್ತನೆಗಳನ್ನು ಹೇಗೆ ರೂಪಿಸುತ್ತವೆ ಎಂಬುದನ್ನು ತೋರಿಸಲು ಸಾಧ್ಯವಾಗಿರುವ ಒಂದು ವಿಧಾನವಾಗಿದೆ. ಜರ್ಮನಿಯ ಪೀಟರ್ ಹೆಗೆಮನ್ ಮತ್ತು ಗಿಯಾರ್ಗ್ ನಾಗೆಲ್ ಅವರಿಬ್ಬರು ಅದನ್ನು ಸಾಧ್ಯ ಮಾಡುವ ಚಾನೆಲ್‌ರೋಡಾಪ್ಸಿನ್ () ಎಂಬ ಗಮನಾರ್ಹ ಪ್ರೋಟೀನ್ ಅನ್ನು ಮೊದಲು ಪತ್ತೆಹಚ್ಚಿದರು. ನಂತರ ಅಮೆರಿಕದ ಕಾರ್ಲ್ ಡೈಸರಾತ್ ಅವರು ಈ ಪ್ರೋಟೀನ್ ಅನ್ನು ನರಕೋಶಗಳಲ್ಲಿ ಬೆಳಕಿನಿಂದ ನಿಯಂತ್ರಿಸಲ್ಪಡುವ ಒಂದು ಸ್ವಿಚ್ ಆಗಿ ರೂಪಿಸಿದರು. ನರವಿಜ್ಞಾನದಲ್ಲಿ ಒಂದು ಹೊಸ ಯುಗಕ್ಕೆ ಅಡಿಪಾಯ ಹಾಕಿದ ಮೂವರ ಈ ಶೋಧವು 2026ರ ಶರೀರವಿಜ್ಞಾನ ಅಥವಾ ವೈದ್ಯಕೀಯ ನೊಬೆಲ್ ಪುರಸ್ಕಾರಕ್ಕೆ ಪಾತ್ರವಾಗಿದೆ.



ನಮ್ಮ ಮೆದುಳು, ಭಾವನೆಗಳನ್ನು, ವರ್ತನೆಗಳನ್ನು ಮತ್ತು ದೈಹಿಕ ಕಾರ್ಯಗಳನ್ನು ಹೇಗೆ ನಿಯಂತ್ರಿಸುತ್ತದೆ ಎಂಬುದು ಬಹುಕಾಲದಿಂದಲೂ ಒಂದು ರಹಸ್ಯವಾಗಿಯೇ ಉಳಿದಿತ್ತು. 20ನೇ ಶತಮಾನದಲ್ಲಿ, ಸಂಶೋಧಕರು ಮೆದುಳಿನ ಯಾವ ಭಾಗಗಳು ಯಾವ ಕಾರ್ಯಗಳ ಮೇಲೆ ಪ್ರಭಾವ ಬೀರುತ್ತವೆ ಎಂಬುದನ್ನು ಅಧ್ಯಯನ ಮಾಡಲು ಪ್ರಾರಂಭಿಸಿದರು. ಆದರೆ ಅವರು ಬಳಸಿದ ವಿಧಾನಗಳಿಂದಾಗಿ, ಕಾರ್ಯ-ಕಾರಣ ಸಂಬಂಧಗಳನ್ನು ( ) ಸಾಬೀತುಪಡಿಸಲು ಸಾಧ್ಯವಾಗಲಿಲ್ಲ. ಆಗ ಅವರು ರೂಪಿಸಿದ್ದ ಮೆದುಳಿನ ಚಿತ್ರಣವು ಏನೂ ತಿಳಿಯದ ಚಿಹ್ನೆಗಳು ಮತ್ತು ಅರ್ಥವಾಗಿರದ ವಿಷಯಗಳಿಂದ ತುಂಬಿದ್ದಂತಹಾ ಒಂದು ಕರಡು ನಕ್ಷೆಯ ಹಾಗಿತ್ತು. ಈಗ ಇದೆಲ್ಲವೂ ಬದಲಾಗುತ್ತಿದೆ. ಏನೋ ಇದು ಕನಸು ಅಂದುಕೊಂಡಿದ್ದ ಮೆದುಳಿನ ನಕ್ಷೆಯನ್ನೂ ಸಹಾ ರೂಪಿಸಲು ಹೊಸ ಶೋಧದಿಂದಾದ ಆಪ್ಟೊಜೆನೆಟಿಕ್ಸ್ () ಸಾಧ್ಯಮಾಡಿದೆ. ಇದು ಈ ವರ್ಷದ ನೊಬೆಲ್ ಪುರಸ್ಕಾರಕ್ಕೆ ಪಾತ್ರವಾದ ಸಂಶೋಧನೆಯ ಸಾರ. ಇದೆಲ್ಲಾ ಸಾಧ್ಯವಾದದ್ದು ಹೇಗೆ? ಮೂರು ಜನ ವಿಜ್ಞಾನಿಗಳ ಕೊಡುಗೆಗಳು ಏನು? ಇದನ್ನೆಲ್ಲಾ ವಿವರವಾಗಿ ಮುಂದೆ ನೋಡೋಣ.

ಇಪ್ಪತ್ತನೆಯ ಶತಮಾನದಲ್ಲಿ ಜೈವಿಕ ರಹಸ್ಯವನ್ನು ಅರಿಯುವ ಸಂಶೋಧಕರ ಮಹದಾಸೆಗೆ, 1953ರ ಡಿ.ಎನ್.ಎ. ರಚನೆಯು ಮಹತ್ತರವಾದ ಬೆಂಬಲವನ್ನು ಕೊಟ್ಟಿತು. ಅದಕ್ಕೆಂದು 1962ರ ವೈದ್ಯಕೀಯ ನೊಬೆಲ್ ಪ್ರಶಸ್ತಿಯನ್ನು ಪಡೆದವರಲ್ಲಿ ಒಬ್ಬರಾದ ಫ್ರಾನ್ಸಿಸ್ ಕ್ರಿಕ್ ನಂತರದ ದಿನಗಳಲ್ಲಿ ಮನಸ್ಸಿನ ಚಟುವಟಿಕೆಗಳ ಕುರಿತು ಆಸಕ್ತರಾಗಿದ್ದರು. ಅವರು ಮಾನವನ ಜಾಗ್ರತ ಮನಸ್ಸು ಮತ್ತು ಅದರ ಪ್ರಜ್ಞೆಯ ಕುರಿತು ಅಧ್ಯಯನಗಳನ್ನು ಆರಂಭಿಸಿದ್ದರು. ಮನಸ್ಸು ಬಹಳ ವೇಗವಾಗಿ ಕಾರ್ಯನಿರ್ವಹಿಸುತ್ತದೆ ಎಂಬುದು ತಿಳಿದ ವಿಷಯವೇ ಆಗಿತ್ತು. ಉದಾಹರಣೆಗೆ ನಾವು ಚೆಸ್ ಆಡುವಾಗ ಎದುರಾಳಿಯ ಆಟದ ವೈಖರಿಯನ್ನು, ಚೆಸ್ ಬೋರ್ಡಿನ ನಮೂನೆಯಲ್ಲಿ ಊಹಿಸಿ, ನೆನಪಿಟ್ಟುಕೊಂಡು, ನಮ್ಮ ಚಲನೆಯ ಮಾದರಿಗಳನ್ನು ರೂಪಿಸುವ ಕೆಲಸ ಇದೆಯಲ್ಲಾ, ಅದು ಎಷ್ಟು ಬಗೆ ಬಗೆಯಲ್ಲಿ ವೇಗ ಮತ್ತು ತೀಕ್ಷ್ಣತೆಯುಳ್ಳದ್ದು ಎಂದು ಊಹಿಸಿಕೊಳ್ಳಬಹುದಲ್ಲಾ ಹಾಗೆ! ಆದರೆ ಹಾಗಾಗಲು ನರಕೋಶದಲ್ಲಿ ಮಾಹಿತಿಯ ಚಟುವಟಿಕೆಗಳು ಬೆಳಕಿನಂತೆ ಪ್ರವಹಿಸುವುದರಲ್ಲಿ ಮಾತ್ರವೇ ಸಾಧ್ಯ ಎಂಬುದನ್ನು ಅವರು ಮೊದಲು ತೀರ್ಮಾನಿಸಿದರು. ಆದರೆ ಇದೊಂದು ಅತ್ಯದ್ಭುತವಾದ ಊಹೆಯಷ್ಟೇ ಆಗಿತ್ತು. ಅದಕ್ಕೊಂದು ಸಾಬೀತು ಬೇಕಿತ್ತು.

ಊಹೆಯೇನೋ ಸತ್ಯಕ್ಕೆ ಸಮೀಪವಾಗಿತ್ತು. ಪ್ರಾಯೋಗಿಕ ಸಾಧ್ಯತೆ ಇದ್ದಾಗ ಮಾತ್ರವೇ ವಿಜ್ಞಾನದ ತೀರ್ಪು ತಾನೇ? ಇದು ಪೀಟರ್ ಹೆಗೆಮನ್ ಅವರ ಕುತೂಹಲದಿಂದ ಪ್ರಾರಂಭವಾಯಿತು. ಮೊದಲು ಏಕಕೋಶೀಯ ಪಾಚಿಯಾದ ಕ್ಲಾಮಿಡೊಮೊನಾಸ್ () ಬೆಳಕಿನ ಮೂಲದತ್ತ ಹೇಗೆ ಈಜಬಲ್ಲದು ಎಂಬ ಕುತೂಹಲವನ್ನು ಪ್ರಾಯೋಗಿಕ ತಿಳಿವಾಗಿಸಲು ಪ್ರಯತ್ನಿಸಿದರು. ಒಂದು ಪೆಟ್ರಿ ಡಿಶ್ (ಸೂಕ್ಷ್ಮಜೀವಿಗಳನ್ನು ಬೆಳೆಸುವ ಪುಟ್ಟ ಗಾಜಿನ ತಟ್ಟೆ) ಒಳಗೆ ಬೆಳೆಸಿದ ಪಾಚಿ()ಯು ಬೆಳಕಿನ ಮೂಲದ ಕಡೆಗೆ ಬೆಳೆಯುವುದನ್ನು ಗಮನಿಸಿದ ಹೆಗೆಮನ್, ಅದರಲ್ಲಿ ಬೆಳಕಿಗೆ ಸಂವೇದನೆಯಾಗುವ ಮಾಲೆಕ್ಯೂಲ್-ಅಣು ಯಾವುದು ಎಂಬ ಪ್ರಶ್ನೆಗೆ ಉತ್ತರದ ಹುಡುಕಾಟಕ್ಕೆ ತೊಡಗಿದರು. ಆ ಪಾಚಿಯ ಬೆಳಕಿಗೆ ಸ್ಪಂದಿಸುವ ಕಣ್ಣಿನ ಸ್ಥಳ()ವನ್ನು ಅವರು ಮೊದಲು ಕಂಡುಹಿಡಿದರು. ಒಂದು ಎಲೆಕ್ಟ್ರೋಡನ್ನು ಬಳಸಿ ಅದಕ್ಕೆ ಪ್ರತ್ಯುತ್ತರವಾಗಿ ಸಿಗ್ನಲ್ ಕೊಡುವಳ ಸ್ಥಳವನ್ನು ಪತ್ತೆ ಹಚ್ಚಿದ್ದರು. ಆವರೆಗೂ ಇದ್ದ ತಿಳಿವಿಗಿಂತಲೂ ಆ ಸಿಗ್ನಲ್ ತುಂಬಾ ವೇಗದ್ದೆಂದು ಗೊತ್ತಾಯಿತು.

ಆದರೆ, ಅಷ್ಟು ಮಾತ್ರವೇ ಸಾಕಾಗದು. ಅದು ಹಾಗೆ ವರ್ತಿಸಲು ಕಾರಣ ಬೇಕಲ್ಲವೇ? ಮುಂದಿನ ಹಂತದಲ್ಲಿ ಅಲ್ಲಿ ಇರಬಹುದಾದ ಬೆಳಕಿನ ಸಂವೇದನೆಯುಳ್ಳ ಪ್ರೋಟೀನಿನ ಹುಡುಕಾಟಕ್ಕೆ ಆರಂಭಿಸಿದರು. ಆದರೆ, ಆ ಜಾಗದಿಂದ ಪ್ರೋಟೀನನ್ನು ಬೇರ್ಪಡಿಸಿದ ಕೂಡಲೇ ಅದು ನಿಸ್ತೇಜವಾಗಿ ಸಂವೇದನೆಯನ್ನು ಕಳೆದುಕೊಳ್ಳುತ್ತಿತ್ತು. ಹಾಗಾಗಿ ಆಗ ಹೆಗೆಮನ್ ಆ ಪ್ರೋಟೀನಿಗೆ ಕಾರಣವಾಗುವ ಜೀನುಗಳ ಹುಡುಕಾಟಕ್ಕೆ ಮೊದಲಾದರು. ಕಡೆಗೂ ಎರಡು ಜೀನ್‌ಗಳು ಬೆಳಕಿಗೆ ಸಂವೇದನೆಯನ್ನು ತೋರಿಸಬಲ್ಲ ಪ್ರೋಟೀನಿಗೆ ಕಾರಣವೆಂಬ ಫಲಿತವನ್ನು ಕಂಡುಕೊಂಡರು. ಆದಾಗ್ಯೂ ಆ ಜೀನ್‌ಗಳು ಪ್ರೋಟೀನಿಗೆ ಕಾರಣವಾಗಬಲ್ಲದು ಎಂಬುದರ ಪುರಾವೆ ಬೇಕಿತ್ತು ತಾನೇ? ಆಗ ಜೊತೆಯಾದವರು ಪ್ರೊ. ಗಿಯಾರ್ಗ್ ನಾಗೆಲ್.

ಹೆಗೆಮನ್ ಮತ್ತು ಗಿಯಾರ್ಗ್ ನಾಗೆಲ್ ಸೇರಿ ಪಾಚಿಯ ಕೋಶದ ಮೇಲ್ಮೈಯಲ್ಲಿ ಇರುವ ಚಾನೆಲ್‌ರೋಡಾಪ್ಸಿನ್ () ಎಂಬ ವಿಶಿಷ್ಟ ಗುಣಲಕ್ಷಣಗಳನ್ನು ಹೊಂದಿರುವ ಪ್ರೋಟೀನ್ ಅನ್ನು ಕಂಡುಹಿಡಿದರು. ನೀಲಿ ಬೆಳಕು ಇದರ ಮೇಲೆ ಬಿದ್ದಾಗ, ಆ ಪ್ರೋಟೀನ್‌ನ ಮೂಲಕ ಒಂದು ಮಾರ್ಗ ಅಥವಾ ಚಾನೆಲ್ ತೆರೆದುಕೊಳ್ಳುತ್ತದೆ. ಆಗ ವಿದ್ಯುದಾವೇಶಿತ ಅಯಾನುಗಳು ಕೋಶದೊಳಗೆ ಪ್ರವೇಶಿಸಿ, ವಿದ್ಯುತ್ ಸಂಕೇತವನ್ನು ( ) ಸೃಷ್ಟಿಸುತ್ತವೆ. ಈ ಪ್ರೋಟೀನ್ ಅನ್ನು ಯಾವುದೇ ಕೋಶದಲ್ಲಿ ಅಳವಡಿಸಿದರೂ, ಆ ಕೋಶಗಳು ಬೆಳಕಿಗೆ ಸಂವೇದನಾಶೀಲವಾಗುತ್ತವೆ ಎಂಬುದನ್ನು ಅವರು ಕಂಡುಕೊಂಡರು.

ನಾಗೆಲ್ ಕಪ್ಪೆಯ ಜೀವಿಕೋಶಗಳನ್ನು ಬಳಸಿ, ಈ ಪ್ರೋಟೀನಿನ ಕಾರ್ಯಕ್ಷಮತೆಯನ್ನು ಪರೀಕ್ಷಿಸಲು ಪ್ರಯೋಗಗಳನ್ನು ನಡೆಸಿದರು. ಹೇಗೂ ಎರಡು ಜೀನ್‌ಗಳನ್ನು ಹೆಗೆಮನ್ ಗುರುತಿಸಿದ್ದರಲ್ಲವೇ? ಆ ಜೀನ್‌ಗಳನ್ನು ಕಪ್ಪೆಯ ದೇಹಕ್ಕೆ ಸೇರಿಸಿ, ಅದರ ಪ್ರತಿ ಸ್ಪಂದನವನ್ನು ಪ್ರಯೋಗಿಸಿದರು. ಹಲವಾರು ಬ್ಯಾಚ್‌ಗಳಲ್ಲಿ ಕಪ್ಪೆಗಳನ್ನು ನಿರಂತರವಾಗಿ ಬಳಸುತ್ತಾ ಆ ಪ್ರೋಟೀನಿನ ಪತ್ತೆಗೆ ನಿರತರಾದರು. ಹೆಗೆಮನ್ ಊಹಿಸಿದಂತೆ ಆ ಪ್ರೋಟೀನು ಬೆಳಕಿಗೆ ಸಂವೇದನೆಯನ್ನು ಒಂದು ಅಯಾನು ಚಾನೆಲ್ ತೆರೆಯುವ ಮೂಲಕ ತೋರುವುದನ್ನು ಕಂಡುಕೊಂಡರು. ಆ ಪ್ರೋಟೀನುಗಳಿಗೆ ಚಾನೆಲ್‌ರೊಡೊಪ್ಸಿನ್ -1 ಮತ್ತು ಚಾನೆಲ್‌ರೊಡೊಪ್ಸಿನ್ -2 (-1 ಮತ್ತು -2) ಎಂದು ಹೆಸರಿಸಿದರು. ಬೆಳಕಿಗೆ ಸಂವೇದನೆಯು ಪ್ರೋಟೀನಿನ ಅಯಾನುಗಳ ಚಾನೆಲ್‌ಗಳ ಪ್ರತಿಕ್ರಿಯೆಯಲ್ಲಿ ಸ್ಪಂದಿಸುವುದನ್ನು ದಾಖಲಿಸಿದರು.

ಹೆಗೆಮನ್ ಪ್ರಯೋಗದಂತೆ, ನಾಗೆಲ್ ಅವರ ವಿವರಣಾತ್ಮಕ ಪ್ರಯೋಗದಲ್ಲಿ ಚಾನೆಲ್‌ರೊಡೊಪ್ಸಿನ್-2 ಬೆಳಕಿಗೆ ತೀಕ್ಷ್ಣವಾಗಿ ಸಂವೇದನೆಯನ್ನು ನೀಡುತ್ತಿತ್ತು. ಇದರ ಸಂಪೂರ್ಣ ವಿವರಗಳನ್ನು ಇಬ್ಬರೂ ಸೇರಿ 2003ರಲ್ಲಿ ಸಂಶೋಧನಾ ಪ್ರಬಂಧವಾಗಿ ಪ್ರಕಟಿಸಿದರು. ಅದರಲ್ಲಿ ಚಾನೆಲ್‌ರೊಡೊಪ್ಸಿನ್-2ಅನ್ನು ಬಳಸಿದಾಗ ಶಕ್ತಿಯುತವಾದ ಇಲೆಕ್ಟ್ರಿಕ್ ಸಂಕೇತಗಳು ದೊರೆಯುವುದೆಂದು ಪ್ರಸ್ತಾಪಿಸಿದ್ದರು. ಈ ಕುರುಹನ್ನು ಮುಂದೆ ಕೊಂಡೊಯ್ದು ಮಾನವ ಜೀವಕೋಶಗಳ ಬಳಕೆಗೆ ಅನುವು ಮಾಡುವ ಸಂಶೋಧನೆಯ ಮಾರ್ಗವನ್ನು ಕಂಡುಹಿಡಿದವರು ಅಮೆರಿಕದ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾಲಯದ ಕಾರ್ಲ್ ಡೈಸರಾತ್ ಎಂಬ ಯುವ ವಿಜ್ಞಾನಿ.

ಮೂಲತಃ ವೈದ್ಯವಿದ್ಯಾರ್ಥಿಯಾದ ಕಾರ್ಲ್ ಡೈಸರೋತ್, ನರವಿಜ್ಞಾನದಲ್ಲಿ ಆಸಕ್ತರಾಗಿ ಸಂಶೋಧನೆಗೆ ತೊಡಗಿದ್ದರು. ನ್ಯೂರೋ ಸರ್ಜನ್ ಆಗುವ ಕನಸು ಹೊತ್ತವರು, ಮಹತ್ವದ್ದನ್ನೇ ಸಾಧಿಸಿದರು. ಮನೋರೋಗದ ಕ್ಲಿನಿಕಲ್ ತರಬೇತಿಯಲ್ಲಿದ್ದಾಗ, ಹೇಗೆ ವಿಭಿನ್ನ ಮನೋರೋಗಿಗಳಿಗೆ ಮೆದುಳು ವಿಭಿನ್ನವಾಗಿ ಕಾರ್ಯನಿರ್ವಹಿಸುತ್ತದೆ ಎಂಬ ಕುತೂಹಲವನ್ನು ಬೆಳೆಸಿಕೊಂಡಿದ್ದರು. ದುಃಖ, ಸಂತೋಷ, ನಿರಾಸೆ, ಖಿನ್ನತೆ ಎಲ್ಲವೂ ಒಂದೇ ಮನಸ್ಸಿನ ವಿಭಿನ್ನ ವರ್ತನೆಗಳಾಗುವ ಕಾರ್ಯವನ್ನು ಮಾಲೆಕ್ಯೂಲಾರ್ ಹಿನ್ನೆಲೆಯಿಂದ ತಿಳಿಯುವ ಹುಮ್ಮಸ್ಸುಳ್ಳ ಉತ್ಸಾಹಿಯಾಗಿದ್ದರು. ಖಿನ್ನತೆಯಿದ್ದ ಮನಸ್ಸು ಸಂತೋಷ ಪಡಲು ಏಕೆ ಕಷ್ಟ ಪಡುತ್ತದೆ? ಸ್ಕಿಜೊಫ್ರಿನಿಕ್ ಅಥವಾ ಆಟಿಸಂ ಬರುವುದಾರೂ ಹೇಗೆ ಇವೇ ಮುಂತಾಗಿ ಪ್ರಶ್ನೆಗಳಿದ್ದವು. ಇದು ಅವರಿಗೆ ನ್ಯೂರೊ ಸೈನ್ಸ್ ಪ್ರವೇಶಕ್ಕೆ ಪ್ರೇರೇಪಿಸಿದ್ದವು.

ನರವಿಜ್ಞಾನದ ಡಾಕ್ಟರೇಟ್ ಪದವಿಯ ಸಂಶೋಧನೆಯಲ್ಲಿ ಮೆದುಳನ್ನು ತೆಳುವಾದ ಹೋಳುಗಳಾಗಿಸಿ ಪೆಟ್ರಿ ಡಿಶ್‌ನಲ್ಲಿಟ್ಟು ಪರೀಕ್ಷಿಸುತ್ತಿದ್ದರು. ಆಗ ಜೀವಂತ ಮೆದುಳಿನಲ್ಲಿ ನರಕೋಶಗಳ ಅಧ್ಯಯನದ ಮಹತ್ವವು ಅರಿವಿಗೆ ಬಂದಿತ್ತು. ಹಿಂದೆಯೇ ಪ್ರಸ್ತಾಪಿಸಿದಂತೆ ಫ್ರಾನ್ಸಿಸ್ ಕ್ರಿಕ್ ಅವರ ಊಹೆಯ ಫಲಿತಗಳಿಗೆ ಸ್ಪಂದನೆಯಾಗಿ ಹಲವಾರು ಸಂಶೋಧಕರು ಆಗಲೇ ಪ್ರಯೋಗದಲ್ಲಿ ತೊಡಗಿದ್ದರು. ಅವರಿಗೆಲ್ಲಾ ಅದೊಂದು ಹಣ ಮತ್ತು ಸಮಯ ಎರಡೂ ವ್ಯರ್ಥವಾಗುವಂತಹಾ ಅನುಮಾನಗಳಿದ್ದವು. ಅಂತಹದರಲ್ಲಿ ಕಾರ್ಲ್ ಡೈಸರೋತ್ ತಮ್ಮದೇ ಸಂಶೋಧಕರ ಗುಂಪನ್ನು ಆರಂಭಿಸಿದರು. ನರಕೋಶಗಳು ಸ್ಪಂದಿಸುವ ಅಥವಾ ಸಂವೇದನೆಯನ್ನು ಕೊಡುವಂತಹಾ ಪ್ರೋಟೀನಿನ ಹುಡುಕಾಟದಲ್ಲಿ ಮೊದಲಾದರು. ಹೆಗೆಮನ್ ಮತ್ತು ನಾಗೆಲ್ ಅವರ ಚಾನೆಲ್‌ರೊಡೊಪ್ಸಿನ್ -2 ಕುರಿತು ತಿಳಿದದ್ದೇ ಕಾರಣವಾಗಿ ಅವರನ್ನು ಸಂಪರ್ಕಿಸಿದರು. ಆ ಪ್ರೋಟೀನಿನ ಗುಟ್ಟನ್ನು ಬಿಟ್ಟುಕೊಡುವ ಡಿ.ಎನ್.ಎ. ಪಡೆದು ಮುಂದುವರೆದರು.

ವೈದ್ಯಕೀಯ ವಿದ್ಯಾರ್ಥಿಯಾಗಿ ಮಾನವ ಸಂಕುಲದ ಹಿತದಲ್ಲಿ ಹುಡುಕ ಹೊರಟ ಡೈಸೆರಾತ್ ಡಿ.ಎನ್.ಎ.ಯನ್ನು ಇಲಿಗಳ ಮೇಲೆ ಪ್ರಯೋಗಿಸಲು ಮುಂದಾದರು. ಪಾಚಿಯಿಂದ ಪಡೆದ ಪ್ರೋಟೀನಿನ ಜೀನ್ ಆದ್ದರಿಂದ ತುಸು ಅನುಮಾನದಿಂದಲೇ ಆರಂಭಿಸಿದ್ದ ಪ್ರಯೋಗ ಚಾನೆಲ್‌ರೊಡೊಪ್ಸಿನ್ -2ಗೆ ಅದ್ಭುತವಾದ ಫಲಿತವನ್ನು ನೀಡಿತ್ತು.

ಚಾನೆಲ್‌ರೊಡೊಪ್ಸಿನ್ -2 ಜೀನ್ ಇರುವ ಕೋಶದ ಸ್ಥಳವು ನೀಲಿ ಬೆಳಕಿಗೆ ಅತ್ಯದ್ಭುತವಾದ ಸಂವೇದನೆಯನ್ನು ನೀಡಿತು. ಇಲಿಗಳ ನರಕೋಶಗಳಲ್ಲಿ ನೀಲಿ ಬೆಳಕನ್ನು ಚೆಲ್ಲಿದಾಗ ನರ ಸಂಕೇತವೊಂದನ್ನು ಪ್ರಚೋದಿಸುವಲ್ಲಿ ಯಶಸ್ವಿಯಾದರು. ಅವರು ಈ ಮಹತ್ವದ ಸಂಶೋಧನೆಯನ್ನು 2005ರಲ್ಲಿ ಪ್ರಕಟಿಸಿದರು. ಎರಡು ವರ್ಷಗಳ ನಂತರ, ನರಕೋಶಗಳಿಗಾಗಿ ರೂಪಿಸಲಾದ ಈ ಬೆಳಕಿನ-ನಿಯಂತ್ರಿತ ಸ್ವಿಚ್ ಅನ್ನು ಜೀವಂತ ಇಲಿಗಳ ಮೆದುಳಿನಲ್ಲಿ ಕಾರ್ಯನಿರ್ವಹಿಸುವಂತೆ ಮಾಡಿದರು. ನರವಿಜ್ಞಾನದಲ್ಲಿ ಇದೊಂದು ಮಹತ್ವದ ಮೈಲುಗಲ್ಲಾಯಿತು.

ಬೆಳಕಿನಿಂದ ನರ ಸಂಕೇತಗಳನ್ನು ನಿಯಂತ್ರಿಸುವ ಈ ವಿಧಾನವನ್ನು ಈಗ ಆಪ್ಟೊಜೆನೆಟಿಕ್ಸ್ ಎಂದು ಕರೆಯಲಾಗುತ್ತದೆ. ಇದು ಅತ್ಯಂತ ವೇಗವಾಗಿ ನರ ವಿಜ್ಞಾನದ ಅಧ್ಯಯನಕಾರರಲ್ಲಿ ಜಾಗತಿಕ ಪ್ರಭಾವವನ್ನು ಗಳಿಸಿತು. ಈಗ ಆಪ್ಟೊಜೆನೆಟಿಕ್ಸ್ ಬಳಸಿ, ಸಂಶೋಧಕರು ನರವೈಜ್ಞಾನಿಕ ಮತ್ತು ಮನೋವೈದ್ಯಕೀಯ ಅಸ್ವಸ್ಥತೆಗಳಲ್ಲಿ ರೋಗಿಗಳ ನಿರ್ದಿಷ್ಟ ನೆನಪುಗಳು, ಭಾವನೆಗಳು ಮತ್ತು ನಡವಳಿಕೆಗಳನ್ನು ನಿಯಂತ್ರಿಸುವ ನರ ಸರ್ಕ್ಯೂಟ್‌ಗಳನ್ನು ಬಹಿರಂಗಪಡಿಸವಷ್ಟು ಸಮರ್ಥ ಉತ್ತರವಾಗಿ ಹೊರಹೊಮ್ಮಿದೆ.

ಕ್ಲಿನಿಕಲ್ ಮೆಡಿಸಿನ್‌ನಲ್ಲಿ, ದೃಷ್ಟಿಹೀನತೆ ಹೊಂದಿರುವ ಜನರಲ್ಲಿ ದೃಷ್ಟಿಯನ್ನು ಪುನಃಸ್ಥಾಪಿಸುವ ಪ್ರಯತ್ನಗಳಲ್ಲಿ ಕೂಡ ಸಂಶೋಧಕರು ಈ ವಿಧಾನವನ್ನು ಬಳಸುತ್ತಿದ್ದಾರೆ.

ನರವಿಜ್ಞಾನದಲ್ಲಿ ಹೊಸದೊಂದು ಯುಗವಾದ ಆಪ್ಟೊಜೆನೆಟಿಕ್ಸ್ ಮೆದುಳಿನ ಬಗ್ಗೆ ನಮ್ಮ ತಿಳಿವಳಿಕೆಯನ್ನು ಮೂಲಭೂತವಾಗಿ ಬದಲಾಯಿಸಿದೆ. ಪ್ರತಿದಿನ ಹೊಸ ಆವಿಷ್ಕಾರಗಳನ್ನು ತರುತ್ತದೆ, ಮಾನವೀಯತೆಯ ದೊಡ್ಡ ರಹಸ್ಯಗಳಲ್ಲಿ ಒಂದನ್ನು ಪರಿಹರಿಸಲು ಸಹಾಯ ಮಾಡುತ್ತದೆ: ನಮ್ಮ ನಂಬಲಾಗದ ಮೆದುಳು ಹೇಗೆ ಕಾರ್ಯನಿರ್ವಹಿಸುತ್ತದೆ, ಎಂಬ ನಂಬಿಕೆ ತರುವಷ್ಟು ಕಾಲದಲ್ಲಿ ಮುಂದೆ ಬರುತ್ತಿದೆ.

ನಮ್ಮ ಮೆದುಳು ಹೇಗೆ ನಮ್ಮ ನೆನಪುಗಳನ್ನು, ಭಾವನೆಗಳನ್ನು ಮತ್ತು ವರ್ತನೆಗಳನ್ನು ರೂಪಿಸುತ್ತದೆ ಎಂಬುದನ್ನು ಅರ್ಥಮಾಡಿಕೊಳ್ಳುವ ಸಂಶೋಧಕರ ಬಹುಕಾಲದ ಕನಸು ಪ್ರಸ್ತುತ ಸಂಶೋಧನೆಯಿಂದ ನನಸಾಗಿದೆ. ಜೀವಂತ ಮೆದುಳಿನಲ್ಲಿನ ಪ್ರತ್ಯೇಕ ನರಕೋಶಗಳ ಚಟುವಟಿಕೆಯನ್ನು ಸಕ್ರಿಯಗೊಳಿಸಲು ಅಥವಾ ನಿಷ್ಕ್ರಿಯಗೊಳಿಸಲು ಸಾಧ್ಯವಾಗಿಸುವ ಆಪ್ಟೊಜೆನೆಟಿಕ್ಸ್ () ತಂತ್ರಜ್ಞಾನ ನಾಂದಿ ಹಾಡಿದೆ. ಮೆದುಳಿನ ರಹಸ್ಯಗಳನ್ನು ಅನಾವರಣಗೊಳಿಸಲು ಈ ವಿಧಾನವನ್ನು ಈಗಾಗಲೇ ಪ್ರಪಂಚದಾದ್ಯಂತದ ಅನೇಕ ಪ್ರಯೋಗಾಲಯಗಳಲ್ಲಿ ಬಳಸಲಾಗುತ್ತಿದೆ.

ಆಪ್ಟೊಜೆನೆಟಿಕ್ಸ್ ತಂತ್ರಜ್ಞಾನದ ಪ್ರಮುಖ ಹರಿಕಾರರು ಪ್ರೊ. ಪೀಟರ್ ಹೆಗೆಮನ್, ಪ್ರೊ. ಗಿಯಾರ್ಗ್ ನಾಗೆಲ್ ಮತ್ತು ಪ್ರೊ. ಕಾರ್ಲ್ ಡೈಸರಾತ್. ಪ್ರೊ. ಪೀಟರ್ ಹೆಗೆಮನ್, ಅವರು ಜರ್ಮನಿಯ ಮ್ಯಾಕ್ಸ್ ಪ್ಲಾಂಕ್ ಜೀವರಸಾಯನ ಸಂಸ್ಥೆಯಲ್ಲಿ ಪಿಎಚ್.ಡಿ ಪದವಿಯನ್ನು ಪಡೆದಿದ್ದಾರೆ. ಇದೀಗ ಅವರು ಜರ್ಮನಿಯ ಹುಂಬೋಲ್ಟ್ ವಿಶ್ವವಿದ್ಯಾಲಯದಲ್ಲಿ ನರವಿಜ್ಞಾನದ ಪ್ರಾಧ್ಯಾಪಕರಾಗಿದ್ದಾರೆ. ಪ್ರೊ. ಗಿಯಾರ್ಗ್ ನಾಗೆಲ್ ಅವರು ಜರ್ಮನಿಯ ಫ್ರಾಂಕ್‌ಫರ್ಟ್ ವಿಶ್ವವಿದ್ಯಾಲಯದಲ್ಲಿ ಪಿಎಚ್.ಡಿ ಪಡೆದಿದ್ದಾರೆ. ಪ್ರಸ್ತುತ ವೂರ್ಜ್‌ಬರ್ಗ್ ವಿಶ್ವವಿದ್ಯಾಲಯದಲ್ಲಿ ಶರೀರವಿಜ್ಞಾನ ಮತ್ತು ಜೀವಿಭೌತವಿಜ್ಞಾನದ ಪ್ರಾಧ್ಯಾಪಕರಾಗಿದ್ದಾರೆ. ಪ್ರೊ. ಕಾರ್ಲ್ ಡೈಸರಾತ್ ಅವರು ಸ್ಟ್ಯಾನ್‌ಫೊರ್ಡ್ ವಿಶ್ವವಿದ್ಯಾಲಯದಲ್ಲಿ ಎಂ.ಡಿ. ಮತ್ತು ಪಿಎಚ್.ಡಿ ಪದವಿಗಳೆರಡನ್ನೂ ಪಡೆದಿದ್ದಾರೆ. ಇದೀಗ ಅದೇ ವಿಶ್ವವಿದ್ಯಾಲಯದಲ್ಲಿ ಜೈವಿಕ ಇಂಜನಿಯರಿಂಗ್ ಮತ್ತು ವರ್ತನೆಯ ವಿಜ್ಞಾನದ ಪ್ರಾಧ್ಯಾಪಕರಾಗಿದ್ದಾರೆ.

ಡಾ. ಟಿ.ಎಸ್. ಚನ್ನೇಶ್

ಲೇಖಕರು ಕೃಷಿ ವಿಜ್ಞಾನಿ. ಮಣ್ಣು ವಿಜ್ಞಾನದಲ್ಲಿ ಸ್ನಾತಕೋತ್ತರ ಮತ್ತು ಪಿಎಚ್.ಡಿ ಪದವಿ ಪಡೆದವರು. ಆಸಕ್ತಿಯನ್ನು ಅಷ್ಟಕ್ಕೆ ಸೀಮಿತಗೊಳಿಸದೆ ವಿಜ್ಞಾನ ಮತ್ತು ಸಮಾಜದ ಸಮೀಕರಣದ ಚರ್ಚೆಗಳನ್ನು ರೂಪಿಸುವಲ್ಲಿ ತಮ್ಮನ್ನು ವಿಸ್ತರಿಸಿಕೊಂಡವರು. ಸಾರ್ವಜನಿಕರಿಗೆ ವಿಜ್ಞಾನದ ಸಾಮಾನ್ಯ ತಿಳಿವಳಿಕೆಯನ್ನು ನೀಡಲು ಸೆಂಟರ್ ಫಾರ್ ಪಬ್ಲಿಕ್ ಅಂಡರ್ಸ್ಟಾಂಡಿಂಗ್ ಆಫ್ ಸೈನ್ಸ್ - ಎಂಬ ವಿನೂತನವಾದ ಸಂಸ್ಥೆಯನ್ನು ಆರಂಭಿಸಿ ಅಲ್ಲಿ ಸಂಶೋಧನೆ, ಪುಸ್ತಕ ಪ್ರಕಟಣೆ, ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ವಿಜ್ಞಾನದ ಸರಿಯಾದ ತಿಳಿವಳಿಕೆ ನೀಡಲು ಕಾರ್ಯಾಗಾರಗಳು, ಸಸ್ಯಗಳು ಮತ್ತು ನೊಬೆಲ್ ಪುರಸ್ಕಾರ ಪಡೆದ ವಿಜ್ಞಾನಿಗಳ ಬಗ್ಗೆ ಮಾಹಿತಿಯುಳ್ಳ ವೀಡಿಯೋಗಳನ್ನು ಮಾಡುತ್ತಿರುವುದು ಅವರ ವಿಶಿಷ್ಟ ಆಸಕ್ತಿಗಳನ್ನು ಪ್ರತಿಫಲಿಸುವಂತಿವೆ. 'ಸಸ್ಯಯಾನ', 'ಅನುರಣನ', 'ಪ್ರತಿಫಲನ', 'ನೊಬೆಲ್ 2017', 'ಮಣ್ಣು ಮತ್ತು ಮಾನವ', 'ಕೃಷಿ ಮತ್ತು ಪೇಟೆಂಟ್', 'ಬೆಳಕಿನ ಬೆನ್ನು ಹತ್ತಿ', 'ಉಳುವವರ ಪರ ವಕಾಲತ್ತು', 'ಅನ್ನದ ಬಟ್ಟಲು' ಮುಂತಾದ ಮೂಲ ಕೃತಿಗಳು ಅಲ್ಲದೆ 'ಆಲ್ಬರ್ಟ್ ಐನ್‌ಸ್ಟೈನ್' ಮತ್ತು 'ಅಲೆಕ್ಸಾಂಡರ್ ಗ್ರಹಾಂ ಬೆಲ್' ಕೃತಿಗಳನ್ನು ರಚಿಸಿದ್ದಾರೆ.

ಲೇಖಕರು ಕೃಷಿ ವಿಜ್ಞಾನಿ. ಮಣ್ಣು ವಿಜ್ಞಾನದಲ್ಲಿ ಸ್ನಾತಕೋತ್ತರ ಮತ್ತು ಪಿಎಚ್.ಡಿ ಪದವಿ ಪಡೆದವರು. ಆಸಕ್ತಿಯನ್ನು ಅಷ್ಟಕ್ಕೆ ಸೀಮಿತಗೊಳಿಸದೆ ವಿಜ್ಞಾನ ಮತ್ತು ಸಮಾಜದ ಸಮೀಕರಣದ ಚರ್ಚೆಗಳನ್ನು ರೂಪಿಸುವಲ್ಲಿ ತಮ್ಮನ್ನು ವಿಸ್ತರಿಸಿಕೊಂಡವರು. ಸಾರ್ವಜನಿಕರಿಗೆ ವಿಜ್ಞಾನದ ಸಾಮಾನ್ಯ ತಿಳಿವಳಿಕೆಯನ್ನು ನೀಡಲು ಸೆಂಟರ್ ಫಾರ್ ಪಬ್ಲಿಕ್ ಅಂಡರ್ಸ್ಟಾಂಡಿಂಗ್ ಆಫ್ ಸೈನ್ಸ್ - ಎಂಬ ವಿನೂತನವಾದ ಸಂಸ್ಥೆಯನ್ನು ಆರಂಭಿಸಿ ಅಲ್ಲಿ ಸಂಶೋಧನೆ, ಪುಸ್ತಕ ಪ್ರಕಟಣೆ, ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ವಿಜ್ಞಾನದ ಸರಿಯಾದ ತಿಳಿವಳಿಕೆ ನೀಡಲು ಕಾರ್ಯಾಗಾರಗಳು, ಸಸ್ಯಗಳು ಮತ್ತು ನೊಬೆಲ್ ಪುರಸ್ಕಾರ ಪಡೆದ ವಿಜ್ಞಾನಿಗಳ ಬಗ್ಗೆ ಮಾಹಿತಿಯುಳ್ಳ ವೀಡಿಯೋಗಳನ್ನು ಮಾಡುತ್ತಿರುವುದು ಅವರ ವಿಶಿಷ್ಟ ಆಸಕ್ತಿಗಳನ್ನು ಪ್ರತಿಫಲಿಸುವಂತಿವೆ. 'ಸಸ್ಯಯಾನ', 'ಅನುರಣನ', 'ಪ್ರತಿಫಲನ', 'ನೊಬೆಲ್ 2017', 'ಮಣ್ಣು ಮತ್ತು ಮಾನವ', 'ಕೃಷಿ ಮತ್ತು ಪೇಟೆಂಟ್', 'ಬೆಳಕಿನ ಬೆನ್ನು ಹತ್ತಿ', 'ಉಳುವವರ ಪರ ವಕಾಲತ್ತು', 'ಅನ್ನದ ಬಟ್ಟಲು' ಮುಂತಾದ ಮೂಲ ಕೃತಿಗಳು ಅಲ್ಲದೆ 'ಆಲ್ಬರ್ಟ್ ಐನ್‌ಸ್ಟೈನ್' ಮತ್ತು 'ಅಲೆಕ್ಸಾಂಡರ್ ಗ್ರಹಾಂ ಬೆಲ್' ಕೃತಿಗಳನ್ನು ರಚಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR